ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 149 RNI Number : KNKAN/25/A2770 07-06-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :149 ರಾಯಚೂರು 07-06-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ರಾಮಲಿಂಗಾರೆಡ್ಡಿ ಕಾಂಗ್ರೆಸ್ ಪಕ್ಷದ ಆಸ್ತಿ, ಅವರು ರಾಜೀನಾಮೆ ಹಿಂಪಡೆದಿದ್ದಾರೆ: ಸುರ್ಜೇವಾಲಾ

ಬೆಂಗಳೂರು: ''ರಾಮಲಿಂಗಾರೆಡ್ಡಿ ಅವರ ಅನುಭವ, ಜಾಣ್ಮೆ ಕಾಂಗ್ರೆಸ್ ಪಕ್ಷಕ್ಕೆ ಅಮೂಲ್ಯವಾದುದು. ಅವರು ಕಾಂಗ್ರೆಸ್ ಪಕ್ಷದ ಆಸ್ತಿ. ಸಚಿವ ಸ್ಥಾನಕ್ಕೆ ನೀಡಿದ್ದ ರಾಜೀನಾಮೆಯನ್ನು ಅವರು ಹಿಂಪಡೆದಿದ್ದಾರೆ'' ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿಂದು ಮಾಧ್ಯಮಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

''ನಮ್ಮ ಪಕ್ಷದ ಹಿರಿಯ ನಾಯಕರಾದ ರಾಮಲಿಂಗಾರೆಡ್ಡಿ ಅವರ ಬಗ್ಗೆ ಕೆಲವು ಮಾಧ್ಯಮಗಳು ಹಾಗೂ ಬಿಜೆಪಿ ನಾಯಕರು ಊಹಾಪೋಹ ಹರಡುತ್ತಿದ್ದಾರೆ. ರಾಮಲಿಂಗಾರೆಡ್ಡಿ ಅವರು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ಜೊತೆಗೆ ಎನ್‌ಎಸ್‌ಯುಐ ಸಮಯದಿಂದಲೂ ಕೆಲಸ ಮಾಡಿದ್ದಾರೆ. 1973ರಿಂದ ಅವರು ಕಾಂಗ್ರೆಸ್ ಪಕ್ಷಕ್ಕಾಗಿ ದುಡಿಯುತ್ತಿದ್ದಾರೆ. ನಮ್ಮ ಪಕ್ಷದ ಕೆಲವು ನಾಯಕರು ಆಗ ಇನ್ನು ಹುಟ್ಟೇ ಇರಲಿಲ್ಲ. ಅವರು 1989ರಿಂದ ಕಾಂಗ್ರೆಸ್ ಪಕ್ಷದ ಶಾಸಕರಾಗಿದ್ದಾರೆ. 8 ಬಾರಿ ಶಾಸಕರಾಗಿ, ಹಲವು ಬಾರಿ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ'' ಎಂದು ತಿಳಿಸಿದರು.



''ರಾಮಲಿಂಗಾರೆಡ್ಡಿ, ಸಿಎಂ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸೇರಿದಂತೆ ಹಲವು ಮುಖಂಡರು ರಾಜ್ಯಾದ್ಯಂತ ಲಕ್ಷಾಂತರ ಕಾರ್ಯಕರ್ತರ ಜೊತೆಗೆ ಅವಿನಾಭಾವ ಸಂಬಂಧ ಹೊಂದಿದ್ದಾರೆ. ಮಾಧ್ಯಮಗಳು ಅವರ ರಾಜೀನಾಮೆ ಸುದ್ದಿಯನ್ನು ಪ್ರಕಟಿಸಿದಾಗ, ನಾನು ಸೇರಿದಂತೆ ಶಿವಕುಮಾರ್, ಹರಿಪ್ರಸಾದ್ ಹಾಗೂ ಸಿದ್ದರಾಮಯ್ಯ ಅವರು ಅವರೊಂದಿಗೆ ಚರ್ಚೆ ಮಾಡಿದ್ದೆವು. ಕೆಲವು ತಪ್ಪು ಸಂವಹನದಿಂದಾಗಿ ರಾಮಲಿಂಗಾರೆಡ್ಡಿ ಅವರು ನಮ್ಮನ್ನು ಮತ್ತೊಮ್ಮೆ ಭೇಟಿ ಮಾಡಿದ್ದರು. ಅವರು ತಮ್ಮ ರಾಜೀನಾಮೆ ಹಿಂಪಡೆದಿರುವ ಬಗ್ಗೆ ಈಗಾಗಲೇ ನಿಮಗೆ ಮಾಹಿತಿ ನೀಡಿದ್ದಾರೆ. ಅವರು ಮುಂದೆಯೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸೈನಿಕನಾಗಿ ಹಾಗೂ ಸಚಿವರಾಗಿ ಕಾರ್ಯ ನಿರ್ವಹಿಸಲಿದ್ದಾರೆ'' ಎಂದು ಸ್ಪಷ್ಟಪಡಿಸಿದರು.

ಬಿಜೆಪಿಗೆ ನಿರಾಸೆಯಾಗಿದೆ: ''ಕಾಂಗ್ರೆಸ್ ಪಕ್ಷದಲ್ಲಿ ಅಧಿಕಾರ ಹಸ್ತಾಂತರ ಸುಗಮವಾಗಿ ಸಾಗಿರುವುದರಿಂದ ಆಘಾತಕ್ಕೆ ಒಳಗಾಗಿರುವ ಬಿಜೆಪಿ, ಈ ಪ್ರಕರಣದಿಂದ ರಾಜಕೀಯ ಲಾಭ ಪಡೆಯುವ ನಿರೀಕ್ಷೆಯಲ್ಲಿತ್ತು. ಈ ಕಾರಣಕ್ಕೆ ಅವರು ವಿಕೆಟ್ ಬೀಳುತ್ತಿದೆ ಎಂದೆಲ್ಲಾ ಮಾತನಾಡಿದ್ದರು. ಆದರೆ, ಅವರಿಗೆ ಈಗ ನಿರಾಸೆಯಾಗಿದೆ. ವಿಜಯೇಂದ್ರ ಹಾಗೂ ಅಶೋಕ್ ಅವರೇ ನೀವು ಜನರ ಮುಂದೆ ನಿರಂತರವಾಗಿ ಕ್ಲೀನ್ ಬೋಲ್ಡ್ ಆಗಲಿದ್ದೀರಿ. ಜನರ ವಿಶ್ವಾಸ ಗಳಿಸಬೇಕಾದರೆ, ಪ್ರಾಮಾಣಿಕತೆ, ಬದ್ಧತೆ, ಜನರ ಸೇವೆ ಮಾಡಬೇಕು. ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಅವುಗಳನ್ನು ಮಾಡಿಕೊಂಡು ಬಂದಿದೆ'' ಎಂದು ತಿಳಿಸಿದರು.

''ಕೋಟ್ಯಂತರ ಜನರು ಗ್ಯಾರಂಟಿ ಯೋಜನೆ ಫಲಾನುಭವಿಗಳಾಗಿದ್ದಾರೆ. ಈಗ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿದೆ. 1.24 ಕೋಟಿ ಮಹಿಳೆಯರು ಪ್ರತಿ ತಿಂಗಳು ಗೃಹಲಕ್ಷ್ಮಿ ಯೋಜನೆ ಮೂಲಕ 2 ಸಾವಿರ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ 1.64 ಕೋಟಿ ಮನೆಗಳು 200 ಯೂನಿಟ್ ವರೆಗೂ ಉಚಿತ ವಿದ್ಯುತ್ ಪಡೆಯುತ್ತಿವೆ. 4.49 ಕೋಟಿ ಜನರು ಅನ್ನಭಾಗ್ಯ ಯೋಜನೆ ಮೂಲಕ ಪ್ರತಿ ತಿಂಗಳು 10 ಕೆ.ಜಿ ಅಕ್ಕಿ ಪಡೆಯುತ್ತಿದ್ದಾರೆ. ಲಕ್ಷಾಂತರ ನಿರುದ್ಯೋಗಿ ಯುವಕರು ನಿರುದ್ಯೋಗ ಭತ್ಯೆ ಪಡೆಯುತ್ತಿದ್ದಾರೆ. ಇದು ಕಾಂಗ್ರೆಸ್ ಸರ್ಕಾರದ ಸಾಧನೆಗಳು'' ಎಂದು ವಿವರಿಸಿದರು.

''ರಾಜ್ಯ ಬಿಜೆಪಿ ನಾಯಕರು ತಮ್ಮ ಆಂತರಿಕ ಕಚ್ಚಾಟದ ಬಿಡುವಿನ ವೇಳೆಯಲ್ಲಿ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಟೀಕೆ ಮಾಡುತ್ತಿದ್ದಾರೆ'' ಎಂದು ಹರಿಹಾಯ್ದರು.

''ಇಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಹಾಗೂ ಇತರ ನಾಯಕರು ವಿಧಾನ ಪರಿಷತ್ ಚುನಾವಣೆ ಹಾಗೂ ಮೂರು ನಾಯಕರು ರಾಜ್ಯಸಭೆ ಚುನಾವಣೆಗೆ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಸಿಎಂ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಇದು ಕರ್ನಾಟಕ ರಾಜ್ಯದ ಪ್ರಗತಿಯ ಹೊಸ ಯುಗವಾಗಿದೆ'' ಎಂದು ಸುರ್ಜೇವಾಲಾ ತಿಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ್ದ ಸಚಿವ ರಾಮಲಿಂಗಾ ರೆಡ್ಡಿ, ಈಗಾಗಲೇ

3ನೇಯ ಪುಟಕ್ಕೆ

ಮುಸ್ಲಿಂ ಸಮುದಾಯದ ಆಕ್ರೋಶ ಸ್ಫೋಟ

ಜಮೀರ್ ಖಾನ್ ಸಚಿವ ಸಂಪುಟದಲ್ಲಿ ಮುಂದುವರಿಸಲು ಒತ್ತಾಯ

ರಾಯಚೂರ,ಜೂ.06-

ರಾಜ್ಯ ಸರ್ಕಾರದಲ್ಲಿ ಮುಸ್ಲಿಂ ಸಮುದಾಯಕ್ಕೆ ನ್ಯಾಯಯುತ ರಾಜಕೀಯ ಪ್ರಾತಿನಿಧ್ಯ ನೀಡಬೇಕು ಹಾಗೂ ಹಿರಿಯ ಕಾಂಗ್ರೆಸ್ ನಾಯಕ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರನ್ನು ಸಚಿವ ಸಂಪುಟ ದಲ್ಲಿ ಮುಂದುವರಿಸಬೇಕು ಎಂದು ಆಗ್ರಹಿಸಿ ರಾಯಚೂರು ಜಿಲ್ಲಾ ಮುಸ್ಲಿಂ ಸಮಿತಿಯ ನೇತೃತ್ವದಲ್ಲಿ ಶನಿವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಶಾಂತಿಯುತ ಪ್ರತಿಭಟನೆ ನಡೆಸಲಾಯಿತು.



ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಮುಸ್ಲಿಂ ಸಮುದಾಯದ ಬೆಂಬಲ ಮಹತ್ವದ ಪಾತ್ರ ವಹಿಸಿದೆ. ಆದರೆ ಸರ್ಕಾರ ರಚನೆಯಾದ ಬಳಿಕ ಸಮುದಾಯಕ್ಕೆ ದೊರೆಯಬೇಕಾದ ರಾಜಕೀಯ ಸ್ಥಾನಮಾನ ಮತ್ತು ಪ್ರಾತಿನಿಧ್ಯ ಸಮರ್ಪಕವಾಗಿ ಸಿಕ್ಕಿಲ್ಲ ಎಂಬ ಅಸಮಾಧಾನ ವ್ಯಕ್ತಪಡಿಸಿದರು.

ಮುಸ್ಲಿಂ ಸಮುದಾಯದ ನಾಯಕರಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ಜಮೀರ್ ಅಹ್ಮದ್ ಖಾನ್ ಅವರನ್ನು ಸಚಿವ ಸಂಪುಟದಿಂದ ಹೊರಗಿಡುವ ಮೂಲಕ ಸಮುದಾಯದ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ಹೇಳಿದರು. ಅವರನ್ನು ತಕ್ಷಣವೇ ಸಚಿವ ಸಂಪುಟದಲ್ಲಿ ಮುಂದುವರಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ವೇಳೆ ''ನ್ಯಾಯಯುತ ಪ್ರಾತಿನಿಧ್ಯ ನಮ್ಮ ಹಕ್ಕು'', ''ಮುಸ್ಲಿಂ ಸಮುದಾಯಕ್ಕೆ ಸಮರ್ಪಕ ರಾಜಕೀಯ ಸ್ಥಾನಮಾನ ನೀಡಬೇಕು'', ''ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ನಮ್ಮ ಶಾಂತಿಯುತ ಹೋರಾಟ'' ಎಂಬ ಘೋಷಣೆಗಳು ಮೊಳಗಿದವು.

ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದ ಕಾಂಗ್ರೆಸ್ ನಾಯಕರು ಸಮುದಾಯದ ಮನವಿಗೆ ಸ್ಪಂದಿಸಿ, ಮುಸ್ಲಿಂ ಸಮಾಜಕ್ಕೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಸಮುದಾಯದ ಬೇಡಿಕೆಗಳನ್ನು ನಿರ್ಲಕ್ಷಿಸಿದಲ್ಲಿ ಮುಂದಿನ ದಿನಗಳಲ್ಲಿ ರಾಜಕೀಯ ಪರಿಣಾಮಗಳು ಎದುರಾಗುವ ಸಾಧ್ಯತೆಯಿದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಮೌಲಾನಾ ಶೇಖ್ ಫಾರೀದ್, ಮೌಲಾನಾ ರಫೀಕ್ ಸಾಬ್, ಮೌಲಾನಾ ಆರೀಫ್ ಸಾಬ್, ಅತಿಫ್ ಸಾಬ್, ಇಮ್ರಾನ್ ಬಡೆಸಾಬ್, ಮೊಹಮ್ಮದ್ ರಫೀಕ್, ಚಂದ್

3ನೇಯ ಪುಟಕ್ಕೆ

ಪ್ರತಿ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ: ಉಪ ಆಯುಕ್ತ ಶರಣಪ್ಪ



ರಾಯಚೂರು ಜೂ.06-

ಜಿಲ್ಲೆಯಲ್ಲಿ ಜೂನ್ 28ರಂದು ನಡೆಯುವ ರಾಷ್ಟ್ರಿಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಡಿ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಮಹಾನಗರ ಪಾಲಿಕೆ ಕಂದಾಯ ವಿಭಾಗದ ಉಪ ಆಯುಕ್ತ ಶರಣಪ್ಪ ಅವರು ಹೇಳಿದರು.

ಜೂನ್ 06ರ ಶನಿವಾರ ದಂದು ನಗರದ ಮಹಾನಗರ ಪಾಲಿಕೆಯ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರಿಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೆ ಪೋಲಿಯೋ ಮುಕ್ತ ಭಾರತದ ವಿಜಯವನ್ನು ಮುಂದುವರೆಸಲು ರಾಯಚೂರು ನಗರದ ಸೇರಿದಂತೆ ತಾಲೂಕಿನಾದ್ಯಂತ ಜೂನ್ 28ರ ಭಾನುವಾರ ಪೋಲಿಯೋ ಲಸಿಕೆ

3ನೇಯ ಪುಟಕ್ಕೆ

ಆತ್ಮನಿರ್ಭರ ಭಾರತ ಮಿಷನ್ ಅಡಿಯಲ್ಲಿ ರೈತರಿಗೆ ದ್ವಿದಳ ಬಿತ್ತನೆ ಬೀಜ ವಿತರಣೆ

ರಾಯಚೂರು ಜೂ.06-

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಆತ್ಮನಿರ್ಭರ ಭಾರತ ದ್ವಿದಳ ಧಾನ್ಯಗಳ ಮಿಷನ್ ಅಡಿಯಲ್ಲಿ ತಾಲ್ಲೂಕಿನ ಅರ್ಹ ರೈತರಿಗೆ ಉಚಿತ ದ್ವಿದಳ ಧಾನ್ಯಗಳ ಬೀಜದ ಕಿಟ್‌ಗಳನ್ನು ರಾಯಚೂರಿನ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದಲ್ಲಿ ಶನಿವಾರ ವಿತರಿಸಲಾಯಿತು.



ಕಾರ್ಯಕ್ರಮಕ್ಕೆ ರಾಯಚೂರಿನ ಉಪ ಕೃಷಿ ನಿರ್ದೇಶಕರಾದ ನಯೀಮ್ ಹುಸೇನ್ ಅವರು ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ದ್ವಿದಳ ಧಾನ್ಯಗಳ ಉತ್ಪಾದನೆ ಹೆಚ್ಚಿಸಿ ರೈತರ ಆದಾಯವನ್ನು ವೃದ್ಧಿಸುವುದು ಸದರಿ ಯೋಜನೆಯ ಉದ್ದೇಶವಾಗಿದೆ. ದ್ವಿದಳ ಧಾನ್ಯ ಮಣ್ಣಿನ ಫಲವತ್ತತೆ ಹೆಚ್ಚಿಸುವುದರ ಜೊತೆಗೆ ಜನರ ಪೌಷ್ಟಿಕಾಂಶ ಭದ್ರತೆಯಲ್ಲಿಯೂ ಪ್ರಮುಖ ಪಾತ್ರ ವಹಿಸಲಿದೆ. ಕಾರಣ ರೈತರು ಸರ್ಕಾರದ

3ನೇಯ ಪುಟಕ್ಕೆ

ರಾಘವೇಂದ್ರ ಹಿಟ್ನಾಳ್‌ಗೆ ಸಚಿವ ಸ್ಥಾನ ನೀಡದಿದ್ದರೆ ರಾಜಕೀಯ ಪರಿಣಾಮ: ಕುರುಬ ಮುಖಂಡರ ಎಚ್ಚರಿಕೆ



ರಾಯಚೂರ,ಜೂ.06-

ರಾಜ್ಯದಲ್ಲಿ ಕುರುಬ ಸಮಾಜದ ಜನಸಂಖ್ಯೆ ಸುಮಾರು 50 ಲಕ್ಷವಿದೆ ಎಂಬುದು ಇತ್ತೀಚೆಗೆ ಬಿಡುಗಡೆಯಾದ ವರದಿಯಿಂದ ತಿಳಿದುಬಂದಿದೆ. ಇಷ್ಟೊಂದು ದೊಡ್ಡ ಸಮುದಾಯಕ್ಕೆ ರಾಜ್ಯ ಸಚಿವ ಸಂಪುಟದಲ್ಲಿ ಸಮರ್ಪಕ ಪ್ರಾತಿನಿಧ್ಯ ದೊರೆಯಬೇಕು ಎಂದು ರಾಯಚೂರು ಜಿಲ್ಲಾ ಕುರುಬ ಸಂಘದ ಜಿಲ್ಲಾಧ್ಯಕ್ಷ ಗುಂಡಪ್ಪ ಸಾಹುಕಾರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಕುರುಬ ಸಮಾಜಕ್ಕೆ ಕೇವಲ ಒಬ್ಬರಿಗೆ ಮಾತ್ರ ಸಚಿವ ಸ್ಥಾನ ನೀಡಲಾಗಿತ್ತು. ಇದೀಗ ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯಾಗಿರುವ ಹಿನ್ನೆಲೆಯಲ್ಲಿ ಕುರುಬ ಸಮಾಜಕ್ಕೆ ಕನಿಷ್ಠ ನಾಲ್ವರು ಸಚಿವ ಸ್ಥಾನಗಳನ್ನು ನೀಡಬೇಕು ಎಂದು ಒತ್ತಾಯಿಸಿದರು.

ಪಕ್ಷದ ಸಂಘಟನೆಗೆ ಹಲವು ವರ್ಷಗಳಿಂದ ದುಡಿಯುತ್ತಿರುವ ಮಾಜಿ ಸಚಿವ ಎಚ್.ಎಂ. ರೇವಣ್ಣ ಅವರಿಗೆ ಸಚಿವ ಸ್ಥಾನ ನೀಡಬೇಕು. ಜೊತೆಗೆ ಕಲ್ಯಾಣ ಕರ್ನಾಟಕ ಭಾಗದಿಂದ ಸತತ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಪ್ರದೇಶದ ಅಭಿವೃದ್ಧಿಗೆ ಅವಕಾಶ ಕಲ್ಪಿಸಬೇಕು ಎಂದರು.

ಅಲ್ಲದೆ, ರಾಯಚೂರು ಜಿಲ್ಲೆಯ ಕುರುಬ ಸಮಾಜದ ಹಿರಿಯ ಹಾಗೂ ಪಕ್ಷದ ನಿಷ್ಠಾವಂತ ಮುಖಂಡರನ್ನು ಗುರುತಿಸಿ ರಾಜ್ಯಮಟ್ಟದ ನಿಗಮ-ಮಂಡಳಿಗಳಲ್ಲಿ ಸ್ಥಾನಮಾನ ನೀಡಬೇಕು. ಸ್ಥಳೀಯ ಸಂಸ್ಥೆಗಳಲ್ಲಿಯೂ ಸಮಾಜದವರಿಗೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಬೇಕೆಂದರು.


ಈ ಸಂದರ್ಭದಲ್ಲಿ ಮಾತನಾಡಿದ ನಾಗವೇಣಿ ಪಾಟೀಲ್, ಕಲ್ಯಾಣ ಕರ್ನಾಟಕ ಭಾಗದಲ್ಲಿ ಕುರುಬ ಸಮಾಜದ ಪ್ರಬಲ ಪ್ರತಿನಿಧಿಯಾಗಿ ಗುರುತಿಸಿಕೊಂಡಿರುವ ರಾಘವೇಂದ್ರ ಹಿಟ್ನಾಳ್ ಅವರಿಗೆ ಸಚಿವ ಸ್ಥಾನ ನೀಡಬೇಕು. ಸಮಾಜದ ನಿರೀಕ್ಷೆಗಳನ್ನು ಸರ್ಕಾರ ಈಡೇರಿಸದಿದ್ದರೆ ಮುಂಬರುವ ಚುನಾವಣೆಯಲ್ಲಿ ಅದರ ರಾಜಕೀಯ ಪರಿಣಾಮವನ್ನು ಪಕ್ಷ ಎದುರಿಸಬೇಕಾಗಬಹುದು ಎಂದು ಎಚ್ಚರಿಕೆ ನೀಡಿದರು.

3ನೇಯ ಪುಟಕ್ಕೆ

ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನಲ್ಲಿ ವಿಶ್ವಪರಿಸರ ದಿನಾಚಾರಣೆ ಆಚರಣೆ

ಮಾನ್ವಿ,ಜೂ.06-

ಪಟ್ಟಣದ ಕಲ್ಮಠದ ಪೂಜ್ಯ ಶ್ರೀ ವಿರೂಪಾಕ್ಷ ಶಿವಾಚಾರ್ಯ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಮತ್ತು ಆಸ್ಪತ್ರೆ ಆವರಣದಲ್ಲಿ ಅರಣ್ಯ ಇಲಾಖೆ, ಪ್ರಾದೇಶಿಕ ಅರಣ್ಯ ವಲಯ ಮಾನವಿ, ತಾಲೂಕಾ ಕಾನೂನು ಸೇವಾ ಸಮಿತಿ ,ತಾಲೂಕು ನ್ಯಾಯವಾದಿಗಳ ಸಂಘ, ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನ ದ್ರವ್ಯಗುಣ ವಿಭಾಗ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಕಂಚಿ ಮಾಯಣ್ಣ ಗೌತಮ್ ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಪ್ರತಿಯೊಬ್ಬರು ಕೂಡ ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಹಾಗೂ ಪ್ರಕೃತಿಯಲ್ಲಿ ಇರುವುದನ್ನು ಬಳಸಿಕೊಳ್ಳುವುದರ ಜೊತೆಗೆ ಮುಂದಿನ ಪೀಳಿಗೆಗಾಗಿ ಅವುಗಳನ್ನು ಉಳಿಸುವ ಕಾರ್ಯವನ್ನು ಮಾಡಬೇಕು. ಗಿಡಗಳನ್ನು ನೆಡುವುದರ ಜೊತೆಗೆ ಅವುಗಳನ್ನು ಕಾಪಾಡಿಕೊಳ್ಳುವುದು ಕೂಡ ಅವಶ್ಯವಾಗಿದೆ. ಇಂದಿನ ಜಾಗತಿಕ ತಾಪಮಾನವನ್ನು ಕಡಿಮೆ ಮಾಡಿಕೊಳ್ಳುವುದಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಸಸಿಗಳನ್ನು ಬೆಳೆಸುವುದು ಹಾಗೂ ಇರುವುದನ್ನು ಉಳಿಸಿಕೊಂಡು ಹೋಗುವುದು ಕೂಡ ಅತ್ಯಂತ ಅವಶ್ಯಕವಾಗಿದೆ ಎಂದು ತಿಳಿಸಿದರು.



ವಲಯ ಅರಣ್ಯಾಧಿಕಾರಿ ಪುರುಷೋತ್ತಮ ರಾವಜೀ ಮಾತನಾಡಿ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಮಾನ್ವಿ ಪಟ್ಟಣದಲ್ಲಿ ಒಂದು ಸಾವಿರ ಗಿಡಗಳನ್ನು ನೆಟ್ಟು ಬೆಳೆಸುವ ಗುರಿಯನ್ನು ಅರಣ್ಯ ಇಲಾಖೆ ಹೊಂದಿದ್ದು. ನಮ್ಮ ಪರಿಸರದಲ್ಲಿ ಹೆಚ್ಚು,ಹೆಚ್ಚು ಗಿಡಗಳನ್ನು ಬೆಳೆಸುವ ಮೂಲಕ ಪ್ರಕೃತಿಯನ್ನು ಸಂರಕ್ಷಿಸೋಣ. ಮರಗಳನ್ನು ನಾವು ಕಾಪಾಡಿದಲ್ಲಿ ನಮ್ಮನ್ನು ಮರಗಳು ಕಾಪಾಡುತ್ತವೆ ಅದ್ದರಿಂದ ಕುಟುಂಬಗಳಲ್ಲಿ ನಡೆಯುವ ಹುಟ್ಟು ಹಬ್ಬ, ಶುಭಾಕಾರ್ಯಗಳ ಸಮಯದಲ್ಲಿ ಗಿಡ ನೆಡುವುದನ್ನು ಅಭ್ಯಾಸ ಮಾಡಿಕೊಳ್ಳುವುದರಿಂದ ಪರಿಸರ ರಕ್ಷಣೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನ ಅವರಣದಲ್ಲಿ ವಿಶ್ವಪರಿಸರ ದಿನಾಚರಣೆ ಅಂಗವಾಗಿ ನೂರಾರು ವಿವಿಧ ತಳಿಯ ಸಸಿಗಳನ್ನು ನೆಡಲಾಯಿತು.

ಕಾರ್ಯಕ್ರಮದಲ್ಲಿ ಕಲ್ಮಠದ ಶ್ರೀ ವಿರೂಪಾಕ್ಷ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯಸಾನಿಧ್ಯವನ್ನು ವಹಿಸಿದರು. ಸಿವಿಲ್ ನ್ಯಾಯಾಧೀಶರಾದ ಆನಂದ ಹೆಚ್, ಕೊಣ್ಣೂರು, ಸಹಾಯಕ ಸರಕಾರಿ ಅಭಿಯೋಜಕರಾದ ಅರ್ಚನಾ ಯಾದವ್ , ಕೆ.ಪಿ.ಎಸ್.ವಿ.ಎಸ್.

3ನೇಯ ಪುಟಕ್ಕೆ

ಸಸಿಗಳ ನೆಟ್ಟು ವಿಶ್ವ ಪರಿಸರ ದಿನಾಚರಣೆ

ಮಕ್ಕಳಂತೆ ಪಾಲನೆ ಪೋಷಣೆ ಮಾಡೋಣ - ಅಜೀತ್ ಹೊನ್ನಟಗಿ

ಸಿರವಾರ,ಜೂ.06-

ಸಸಿಗಳು ಚಿಕ್ಕ ಮಕ್ಕಳು ಇದ್ದಂತೆ ಅವುಗಳಿಗೆ ನೀರು, ಗೊಬ್ಬರ ಹಾಕಿ ದನಕರುಗಳಿಂದ ಕಾಪಾಡಿದರೆ ಮುಂದೆ ಹೆಮ್ಮರವಾಗಿ ನಮಗೆ ಆಮ್ಲಜನಕ, ನೇರಳು ನಿಡುತ್ತದೆ. ಪ್ರತಿ 5 ವಿದ್ಯಾರ್ಥಿಗಳು ಸೇರಿ 2 ಸಸಿಗಳನ್ನು ಹಾಕಿ ಜೋಪಾನ ಮಾಡಿದರೆ ಒಂದೆ ವರ್ಷದಲ್ಲಿ ನಮ್ಮ ಕಾಲೇಜು ಆವರಣ ಹಸಿರಿನಿಂದ ಕಂಗೊಳಿಸುತ್ತದೆ ಎಂದು ಪ.ಪಂಚಾಯತಿ ವಾರ್ಡ ನಂ 14 ಸದಸ್ಯರಾದ ಅಜೀತ್ ಕುಮಾರ ಹೊನ್ನಟಗಿ ಹೇಳಿದರು.



ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅರಣ್ಯ ಇಲಾಖೆಯ ಅಧಿಕಾರಿ ಕಿಶೋರ್ ಕುಮಾರ್ ರೊಂದಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಾವು ಜೀವಿಸಲು, ಉಸಿರಾಟಕ್ಕೆ ಸಸಿಗಳನ್ನು ಅವಶ್ಯವಾಗಿ ಬೆಳೆಸಬೇಕು, ಮುಂದೆ ಬಿಸಿಲಿನ ತಾಪಮಾನ ಹೆಚ್ಚುತ್ತದೆ, ಮುಂದಿನ ಪೀಳಿಗೆಗೆ ಗಿಡ, ಮರಗಳು ಉಳಿಸಿ, ಬೆಳೆಸಬೇಕು, ಇಲ್ಲವಾದಲ್ಲಿ ಆಮ್ಲಜನಕದ ಕೊರತೆ ಉಂಟಾಗುತ್ತದೆ ಎಂದರು. ನಂತರ ಬಾಲಕರ ಶಾಲೆಯ ಮು.ಗು.ಗಿರಿಜಾ, ಪತ್ರಕರ್ತರಾದ ಸುರೇಶ ಹೀರಾ ಪರಿಸರದ ಬಗ್ಗೆ ಮಾಹಿತಿ ನೀಡಿದರು. ದಲಿತ

3ನೇಯ ಪುಟಕ್ಕೆ

ಪರಿಸರ ಮತ್ತು ಮಾನವನ ಜೀವನ; ಒಂದು ಅವಿನಾಭಾವ ಸಂಬಧ- ನ್ಯಾ. ಸಿದ್ದಲಿಂಗಪ್ರಭು ಅಭಿಮತ



ಬಳ್ಳಾರಿ,ಜೂ.06

ಮಾನವನ ಉತ್ತಮ ಆರೋಗ್ಯಕ್ಕೆ ಶುದ್ಧವಾದ ಗಾಳಿ, ನೀರು ಮತ್ತು ಉತ್ತಮ ಆಹಾರ ಅತ್ಯಂತ ಪ್ರಮುಖವಾದ ಅಗತ್ಯಗಳಾಗಿದ್ದು, ಇವೆಲ್ಲವೂ ನಮಗೆ ಪ್ರಕೃತಿಯಿಂದಲೇ ದೊರೆಯುತ್ತಿವೆ. ಹಾಗಾಗಿ ನಮ್ಮ ದೈನಂದಿನ ಜೀವನ ಕ್ರಮಕ್ಕೂ ಮತ್ತು ಪರಿಸರಕ್ಕೂ ಒಂದು ಅವಿನಾಭಾವ ಸಂಬಧವಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಸಿದ್ದಲಿಂಗಪ್ರಭು ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಪ್ರಕೃತಿಯಿಂದ ಪ್ರೇರಿತ-ಹವಾಮಾನಕ್ಕಾಗಿ, ನಮ್ಮ ಭವಿಷ್ಯಕ್ಕಾಗಿ ಎಂಬ ಘೋಷವಾಕ್ಯದೊಂದಿಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರದಿಂದ ಪ್ರೇರಣೆಗೊಂಡು, ನಮ್ಮ ಮುಂದಿನ ಉಜ್ವಲ ಭವಿಷ್ಯಕ್ಕಾಗಿ ಮತ್ತು ಅತ್ಯುತ್ತಮ ಹವಾಮಾನಕ್ಕಾಗಿ ನಾವು ಪಣತೊಡಬೇಕು. ಕೇವಲ ಪಣತೊಡುವುದಷ್ಟೇ ಅಲ್ಲದೆ, ಆ ನಿಟ್ಟಿನಲ್ಲಿ ನಾವೆಲ್ಲರೂ ದೈನಂದಿನ ಜೀವನದಲ್ಲಿ ಶ್ರಮಿಸಬೇಕಾಗಿದೆ. ಒಬ್ಬ ಮನುಷ್ಯನಿಗೆ ಉತ್ತಮ ಗಾಳಿ ಮತ್ತು ಆಮ್ಲಜನಕ ಸಿಗಬೇಕಾದರೆ ಕನಿಷ್ಠ 7 ಮರಗಳ ಅವಶ್ಯಕತೆ ಇರುತ್ತದೆ. ಆದರೆ ಪ್ರಸ್ತುತ ನಮ್ಮ ಜನಸಂಖ್ಯೆಗೆ ಅನುಗುಣವಾಗಿ ಅಷ್ಟು ಪ್ರಮಾಣದಲ್ಲಿ ಮರ-ಗಿಡಗಳು ಇಲ್ಲದಿರುವುದು ಆತಂಕಕಾರಿ ವಿಚಾರ ಎಂದು ಕಳವಳ ವ್ಯಕ್ತಪಡಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಮಾನವನ ಅಸ್ತಿತ್ವಕ್ಕೆ ಪರಿಸರ ಅತ್ಯಂತ ಅತ್ಯಗತ್ಯವಾಗಿದ್ದು, ಪ್ರಕೃತಿಯನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಪ್ರಸ್ತುತ ಜಗತ್ತಿನಲ್ಲಿ ಪರಿಸರ ಮಾಲಿನ್ಯದ ಭೀತಿ ಹೆಚ್ಚಾಗುತ್ತಿದ್ದು, ನಾವೆಲ್ಲರೂ ಜಾಗೃತರಾಗಬೇಕಾದ ತುರ್ತು ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಪರಿಸರಕ್ಕೆ ಮಾನವನ ಅಗತ್ಯವಿಲ್ಲ, ಆದರೆ ಮಾನವನಿಗೆ ಪರಿಸರದ ಅಗತ್ಯ ಖಂಡಿತ ಇದೆ. ಪ್ರಕೃತಿ ತಾನಾಗಿಯೇ ಚೇತರಿಸಿಕೊಳ್ಳುವ ಶಕ್ತಿಯನ್ನು ಹೊಂದಿದೆ. ನಾವು ಪರಿಸರವನ್ನು ಚೆನ್ನಾಗಿಟ್ಟುಕೊಂಡು, ಇಂಗಾಲದ ಡೈ ಆಕ್ಸೈಡ್ ಪ್ರಮಾಣವನ್ನು ನಿಯಂತ್ರಿಸಿದರೆ ಮಾತ್ರ ಮಾನವ ಸಂಕುಲ ಉಳಿಯಲು ಸಾಧ್ಯ ಎಂದು ಅವರು ಅಭಿಪ್ರಾಯಪಟ್ಟರು.

ಭೂಮಿಯ ಮೇಲಿರುವ ಕ್ರಿಮಿ-ಕೀಟಗಳು ನಾಶವಾದರೆ ಕೇವಲ ಮೂರೇ ವರ್ಷಗಳಲ್ಲಿ ಇಡೀ ಮನುಕುಲ ನಾಶವಾಗುತ್ತದೆ. ಅದೇ ರೀತಿ ವನ್ಯಜೀವಿಗಳು ಮತ್ತು ಅರಣ್ಯ ನಾಶವಾದರೆ 100 ವರ್ಷಗಳಲ್ಲಿ ಭೂಮಿ ವಿನಾಶದ ಅಂಚು ತಲುಪುತ್ತದೆ. ಆದರೆ ಮನುಕುಲವೇ ಇಲ್ಲದಿದ್ದರೆ ಭೂಮಿ ಮತ್ತಷ್ಟು ಸಂಪದ್ಭರಿತವಾಗಿ ಕಂಗೊಳಿಸುತ್ತದೆ ಎಂದು ಎಚ್ಚರಿಸಿದರು.

ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಬಸವರಾಜ ಕೆ.ಎನ್ ಅವರು ಮಾತನಾಡಿ, ಮನುಷ್ಯ ಮತ್ತು ವೃಕ್ಷಗಳ ನಡುವೆ ಪ್ರಕೃತಿಯೇ ರೂಪಿಸಿರುವ ಅದ್ಭುತ ಸಂಬಧವಿದೆ. ಮನುಷ್ಯರು ಆಮ್ಲಜನಕವನ್ನು ಪಡೆದು ಇಂಗಾಲದ ಡೈ ಆಕ್ಸೈಡ್ ಹೊರಬಿಟ್ಟರೆ, ಮರಗಳು ಆ ಇಂಗಾಲದ ಡೈ ಆಕ್ಸೈಡ್ ಪಡೆದು ನಮಗೆ ಆಮ್ಲಜನಕವನ್ನು ನೀಡುತ್ತವೆ. ಮನುಷ್ಯನ ಉಸಿರಾಟ ಪ್ರಕ್ರಿಯೆಯನ್ನು ನಡೆಸುವ ಶ್ವಾಸಕೋಶಗಳ ಚಿತ್ರವನ್ನು ಸೂಕ್ಷ್ಮವಾಗಿ ಗಮನಿಸಿದರೆ, ಅದು ತಲೆಕೆಳಗಾಗಿ ನಿಂತಿರುವ ಒಂದು ಮರದ ಆಕಾರದಲ್ಲೇ ಕಾಣಿಸುತ್ತದೆ. ಇದು ಪ್ರಕೃತಿ ನಮಗೆ ನೀಡಿರುವ ಸಾಂಕೇತಿಕ ಸಂದೇಶವಾಗಿದೆ ಎಂದು ಹೇಳಿದರು.

ಹಿಂದೆ ಕಾಡುಗಳಲ್ಲಿ ಅಥವಾ ಗ್ರಾಮೀಣ ಭಾಗಗಳಲ್ಲಿ ಪ್ರಾಣಿಗಳು ಸತ್ತಾಗ, ಆಕಾಶದಲ್ಲಿ ಹಾರಾಡುವ ರಣಹದ್ದುಗಳನ್ನು ನೋಡಿ ಪ್ರಾಣಿ ಸತ್ತಿರುವುದು ತಿಳಿಯುತ್ತಿತ್ತು. ಅವು ಯಾವುದೇ ಕೂಲಿ ಪಡೆಯದೇ ಪರಿಸರವನ್ನು ಸ್ವಚ್ಛಗೊಳಿಸುವ ಉಚಿತ ಕಾವಲುಗಾರರಾಗಿದ್ದವು. ಆದರೆ ಕಳೆದ ಮೂರು ದಶಕಗಳಲ್ಲಿ ರಣಹದ್ದುಗಳ ಸಂತತಿ ಶೇ.90 ರಿಂದ 95 ರಷ್ಟು ಕ್ಷೀಣಿಸಿದೆ. ಇದಕ್ಕೆ ಮುಖ್ಯ ಕಾರಣ ಸಾಕುಪ್ರಾಣಿಗಳ ಚಿಕಿತ್ಸೆಗೆ ಬಳಸುತ್ತಿದ್ದ ಡೈಕ್ಲೋಫೆನಾಕ್' ಎಂಬ ನೋವು ನಿವಾರಕ ಔಷಧಿ. ಈ ಔಷಧೋಪಚಾರ ಪಡೆದ ಜಾನುವಾರುಗಳು ಸತ್ತಾಗ, ಅವುಗಳ ಮಾಂಸ ತಿಂದ ರಣಹದ್ದುಗಳ ಕಿಡ್ನಿ ವೈಫಲ್ಯಗೊಂಡು ಅವು ಸಾವನ್ನಪ್ಪಿದವು. ರಣಹದ್ದುಗಳು ಇಲ್ಲದ ಜಾಗವನ್ನು ಬೀದಿ ನಾಯಿಗಳು ಆಕ್ರಮಿಸಿಕೊಂಡವು. ಯಥೇಚ್ಛವಾಗಿ ಆಹಾರ ಸಿಕ್ಕಿದ್ದರಿಂದ ನಾಯಿಗಳ ಸಂತತಿ ತೀವ್ರವಾಗಿ ಹೆಚ್ಚಳವಾಯಿತು. ಬೀದಿ ನಾಯಿಗಳ ಕಾಟ ಹೆಚ್ಚಾಗಿದ್ದರಿಂದ ಇತ್ತೀಚೆಗೆ ಸುಪ್ರೀಂ ಕೋರ್ಟ್ ಕೂಡ ನಾಯಿಗಳ ಜನಸಂಖ್ಯೆ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕಾಗಿ ಬಂತು. ನಾಯಿಗಳ ಹೆಚ್ಚಳದಿಂದ ರೇಬಿಸ್' ಹರಡುವಿಕೆ ಹೆಚ್ಚಾಯಿತು. ರೇಬಿಸ್‌ಗೆ ಚಿಕಿತ್ಸೆ ಇಲ್ಲದ ಕಾರಣ ಕೇವಲ ಲಸಿಕೆಗಳಿಗಾಗಿ ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ಆರೋಗ್ಯ ವಲಯದಲ್ಲಿ ಕೋಟ್ಯಂತರ ರೂಪಾಯಿ ಹೆಚ್ಚುವರಿ ವೆಚ್ಚವಾಗುತ್ತಿದೆ. ಒಂದು ರಣಹದ್ದು ಉಚಿತವಾಗಿ ಮಾಡುತ್ತಿದ್ದ ಪರಿಸರ ಸ್ವಚ್ಛತೆಯ ಕೆಲಸ ನಿಂತುಹೋಗಿದ್ದರಿಂದ ಇಂದು ಮಾನವ ಇಷ್ಟೊಂದು ದೊಡ್ಡ ಬೆಲೆ ತೆರಬೇಕಾಗಿ ಬಂದಿದೆ. ಪ್ರಕೃತಿಯಿಂದ ಯಾವುದೇ ಒಂದು ಜೀವಿ ಅಳಿದರೂ ಅದರ ತೀವ್ರತೆ ಮನುಷ್ಯನಿಗೆ ತಡವಾಗಿ ಅರ್ಥವಾಗುತ್ತದೆ ಎಂದರು.

ಕಳೆದ ವಾರದಲ್ಲಿ ಬಳ್ಳಾರಿಯಲ್ಲಿ ಬಿದ್ದ ಕೇವಲ ಎರಡು ಮಳೆಗಳಿಂದ ಇಡೀ ಜಿಲ್ಲೆಯ ತಾಪಮಾನ ತಕ್ಷಣವೇ 3 ಡಿಗ್ರಿ ಸೆಲ್ಸಿಯಸ್‌ನಷ್ಟು ಕಡಿಮೆಯಾಯಿತು. ಮನುಷ್ಯರು ಇಷ್ಟೇ ಪ್ರಮಾಣದ ತಾಪಮಾನ ಕಡಿಮೆ ಮಾಡಬೇಕಾದರೆ ಸಾವಿರಾರು ಎಸಿ, ಕೂಲರ್ ಹಾಗೂ ಫ್ಯಾನ್‌ಗಳನ್ನು ದಿನಗಟ್ಟಲೆ ಓಡಿಸಬೇಕಾಗುತ್ತಿತ್ತು. ಆದರೆ ಪ್ರಕೃತಿ ಇದನ್ನು ಕ್ಷಣಮಾತ್ರದಲ್ಲಿ ಉಚಿತವಾಗಿ ಮಾಡಿತೋರಿಸಿತು. ನಾವು ಕೃತಕವಾಗಿ ಸೃಷ್ಟಿಸುವ ಪರಿಸರ ಎಂದಿಗೂ ನೈಸರ್ಗಿಕ ಪರಿಸರಕ್ಕೆ ಸಮನಾಗಲಾರದು ಎಂದು ಅಭಿಪ್ರಾಯಪಟ್ಟರು.

ಪರಿಸರ ದಿನಾಚರಣೆ ಎಂದರೆ ಕೇವಲ ಗಿಡ ನಡುವುದು ಮಾತ್ರವಲ್ಲ, ನಮ್ಮ ದೈನಂದಿನ ಜೀವನ ಶೈಲಿಯನ್ನು ಬದಲಾಯಿಸಿಕೊಳ್ಳುವುದಾಗಿದೆ. ಅದಕ್ಕಾಗಿ 3ಆರ್ ಸೂತ್ರ ಪಾಲಿಸಬೇಕಾಗಿದೆ. ಪ್ಲಾಸ್ಟಿಕ್ ಬಳಕೆಯನ್ನು ಗಣನೀಯವಾಗಿ ಕಡಿಮೆ (ರೆಡ್ಯೂಸ್) ಮಾಡುವುದು. ವಸ್ತುಗಳನ್ನು ಎಸೆಯದೇ ಮರುಬಳಕೆ(ರೀಯೂಸ್) ಮಾಡುವುದು. ಅವಶ್ಯಕತೆ ಇಲ್ಲದ ಕಡೆ ಪ್ಲಾಸ್ಟಿಕ್ ಬಳಸುವುದಿಲ್ಲ (ರೀಫ್ಯೂಸ್) ಎಂದು ತಿರಸ್ಕಾರ ಮಾಡುವುದು ಎಂದು ತಿಳಸಿದರು.

ವಿ.ಶ್ರೀ.ಕೃ. ವಿಶ್ವವಿದ್ಯಾಲಯದ ಪ್ರಾಣಿಶಾಸ್ತ ವಿಭಾಗದ ಸಹಾಯಕ ಪ್ರಾಧ್ಯಾಪಕ ನಾಗಭೂಷಣ ವಿ.ಚರಂತಿಮಠ ಹಾಗೂ ವೀರಶೈವ ಕಾಲೇಜಿನ ಮಾಜಿ ಪ್ರಾಂಶುಪಾಲರು ಹಾಗೂ ಪ್ರಾಣಿಶಾಸ್ತ ವಿಭಾಗದ ಮುಖ್ಯಸ್ಥ ಜಿ.ಮನೋಹರ ಅವರು ಪರಿಸರ ರಕ್ಷಣೆ, ಬೆಳೆಸುವಿಕೆ ಅಂಶಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಡಾ.ಜೋಳ ದರಾಶಿ ದೊಡ್ಡನಗೌಡ ರಂಗಮದಿರದ ಆವರಣದಲ್ಲಿ ಗಣ್ಯರು ಸಸಿಗಳನ್ನು ನೆಟ್ಟು ನಿರೂಣಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಸರ್ಕಾರಿ, ಖಾಸಗಿ, ಅನುದಾನಿತ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಕಾಣಿಕೆ, ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜೆ.ಎಂ.ತಿಪ್ಪೇಸ್ವಾಮಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಜಯನಗರ ವಿಭಾಗೀಯ ಕಚೇರಿಯ ಹಿರಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳೀಧರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಟಿ.ಎಂ. ಸಿದ್ದೇಶ್ವರ ಬಾಬು ಸೇರಿದಂತೆ ಸ್ಕೌಟ್ ಮತ್ತು ಗೈಡ್ಸ್ ನ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಗಿಣಿಗೇರಿ ಗ್ರಾಮ ಪಂಚಾಯತಿ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಎಸ್.ಎಂ ಕಾಂಬ್ಳೆ



ಕೊಪ್ಪಳ ಜೂ.06

ಪರಿಸರದ ಬಗ್ಗೆ ಜಾಗೃತಿ, ರಕ್ಷಣೆ ಮತ್ತು ಜೀವಿಗಳ ಪೋಷಣೆಯಲ್ಲಿ ಪರಿಸರ ಪ್ರಮುಖ ಪಾತ್ರವನ್ನುವಹಿಸುತ್ತದೆ. ಆದ್ದರಿಂದ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕಡಿಂಜ ಎಸ್.ಎಂ ಕಾಂಬ್ಳೆ ಅವರು ಹೇಳಿದರು.

ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಕೊಪ್ಪಳ ತಾಲೂಕಿನ ಗಿಣಿಗೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಶುಕ್ರವಾರ (ಜೂ. 5 ರಂದು) ಗಿಣಿಗೇರಿ ಗ್ರಾಮ ಪಂಚಾಯತಿ ಹಾಗು ಅಲ್ಟ್ರಾಟೆಕ್ ಸಿಮೆಂಟ್ ಕಂಪನಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಸಿ ನೆಡುವ ಹಾಗೂ ಪೈಪ್ ಕಾಂಪೋಸ್ಟ್ ಗೊಬ್ಬರ ತಯಾರಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಸಮೃದ್ಧ, ಆರೋಗ್ಯಕರ ಜೀವನ ಮತ್ತು ಭೂಮಿಯ ಮೇಲಿನ ಪ್ರತಿಯೊಂದು ಜೀವಿಯ ಜೀವನದ ಅಸ್ತಿತ್ವಕ್ಕೆ ಕಾರಣವಾಗಿರುತ್ತದೆ. ಇದನ್ನು ಹೇಗಾದರೂ ಮಾಡಿ ತಡೆಗಟ್ಟುವ ನಿಟ್ಟಿನಲ್ಲಿ ಪ್ರತಿಯೊಬ್ಬರಲ್ಲೂ ಪರಿಸರದ ಬಗ್ಗೆ ಕಾಳಜಿ ಮೂಡಿಸುವ ಸಲುವಾಗಿ ಪ್ರತಿ ವರ್ಷ ಜೂನ್-5 ರಂದು ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ. ಪರಿಸರದ ಬಗ್ಗೆ ಪ್ರತಿ ಮನುಷ್ಯನಲ್ಲೂ ಜಾಗೃತಿ ಮೂಡಿಸುವುದು ಮತ್ತು ಪರಿಸರವನ್ನು ಹಾಳು ಮಾಡುವುದನ್ನು ತಡೆಯುವುದು ಇದರ ಉದ್ದೇಶವಾಗಿದೆ. ನಮ್ಮ ಪರಿಸರದ ಸಂರಕ್ಷಣೆಗಾಗಿ ನಾವೆಲ್ಲರೂ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸುವುದು ಅವಶ್ಯವಿದೆ. ನಮ್ಮ ದೈನಂದಿನ ಜೀವನದಲ್ಲಿ ಕೆಲವೊಂದು ಪರಿಸರಕ್ಕೆ ಸಂಬಂಧಿಸಿದಂತೆ ಬದಲಾವಣೆ ಅನುಸರಿಸಿದಲ್ಲಿ ಭೂಮಿಯ ಉಳಿವಿಗೆ ಸಹಾಯಕವಾಗುತ್ತದೆ ಎಂದರು.

ಮಾಜಿ ಜಿಲ್ಲಾ ಪಂಚಾಯತ ಸದಸ್ಯರಾದ ಗೂಳಪ್ಪ ಹಲಗೇರಿ ಅವರು ಮಾತನಾಡಿ, ಮರಗಳನ್ನು ಕಡಿಯುತ್ತಿರುವದರಿಂದ ಬಿಸಿಲಿನ ತಾಪ ಏರಿಕೆಗೆ ಕಾರಣವಾಗಿದ್ದು, ಸ್ವಚ್ಛ ಸುಂದರ ಜೀವನ ನಡೆಸಬೇಕಾದರೆ ಪ್ರತಿ ಮನೆಗೆ ಒಂದು ಗಿಡ ನೆಡುವದಲ್ಲದೇ ಅಷ್ಟೇ ಅವುಗಳನ್ನು ಪೋಷಿಸಬೇಕು. ಹೆಚ್ಚು ಹೆಚ್ಚು ಗಿಡಗಳನ್ನು ನೆಡುವದರಿಂದ ಗ್ರಾಮದಲ್ಲಿ ಉತ್ತಮ ಪರಿಸರ ನಾವು ಪಡೆಯಬಹುದಾಗಿದೆ ಎಂದರು.

★ಪೈಪ್ ಕಾಂಪೋಸ್ಟ್ ಪ್ರಾತ್ಯಕ್ಷಿಕೆ:★ ಮನೆಯಲ್ಲಿರುವ ಹಸಿ ಕಸವನ್ನು ಗೊಬ್ಬರವನ್ನಾಗಿ ಪರಿವರ್ತಿಸಲು ಪ್ರತಿ ಮನೆಯ ಮುಂದಿನ ಜಾಗೆಯಲ್ಲಿ ಪೈಪ್ ಅಳವಡಿಕೆ, ಸಗಣಿ, ಬೆಲ್ಲ ಮಿಶ್ರಣ ಮಾಡಿ ಪ್ರತಿ ದಿನ ಹಸಿ ಕಸವನ್ನು ಇದರಲ್ಲಿ ಹಾಕಿ ಇದು ಭರ್ತಿಯಾದ ಮೇಲೆ 4 ತಿಂಗಳು ಹಾಗೆ ಬಿಟ್ಟು ನಂತರ ಅದನ್ನು ಕೈ ತೋಟಕ್ಕೆ ಗೊಬ್ಬರವಾಗಿ ಬಳಸಲು ಯೋಗ್ಯವಾಗುವ ಕುರಿತು ಪ್ರಾತ್ಯಕ್ಷಿಕೆ ಮೂಲಕ ಜಿಲ್ಲಾ ಪಂಚಾಯತಿಯ ಸ್ವಚ್ಛ ಭಾರತ ಮಿಷನ್ ಸಮಾಲೋಚಕಿ ಬಸಮ್ಮ ಹುಡೇದ ಅವರು ವಿವರಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪ ಂ ಚ ಾ ಯ ತಿ ಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಮಾಜಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಕರಿಯಪ್ಪ ಮೇಟಿ, ತಾಲೂಕ ಪಂಚಾಯತಿ ನಾಮನಿರ್ದೇಶಿತ ಕೆಡಿಪಿ ಸದಸ್ಯ ನಾಗರಾಜ ಚಳ್ಳೊಳ್ಳಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ, ಎಸ್‌ಡಿಎಂಸಿ ಅಧ್ಯಕ್ಷರಾದ ಸುಭಾಸ ಹಲಗೇರಿ, ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ಎಚ್.ಎಫ್ ಜೋಶಿ, ದಾನಪ್ಪ ಹಲಗೇರಿ, ಮಲ್ಲಿಕಾರ್ಜುನ ಹಲಗೇರಿ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಮುಖಂಡರಾದ ಗೂದ್ನೆಪ್ಪ ಹೋಸೂರು, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು, ಪ್ರೌಢಶಾಲೆ ಮುಖ್ಯೋಪಾಧ್ಯಾಯರು, ಸಂಜೀವಿನಿ ಯೋಜನೆಯ ಸಿಬ್ಬಂದಿ ವಿದ್ಯಾವತಿ, ಸದಸ್ಯರು, ಗ್ರಾ.ಪಂ ಕಾರ್ಯದರ್ಶಿ ಮಂಜುನಾಥ, ಸಿಬ್ಬಂದಿಗಳು ಹಾಜರಿದ್ದರು.

ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಗಿಣಿಗೇರಿ ಗ್ರಾಮ ಪಂಚಾಯಿತಿ ಆವರಣದಲ್ಲಿ ಬೇವು, ಅರಳೆ, ನೇರಳೆ ಸಸಿಗಳನ್ನು ನೆಡಲಾಯಿತು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಕಟ್ಟುನಿಟ್ಟಿನ ಕ್ರಮ ವಹಿಸಿ: ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಜೂ.06

ಜಿಲ್ಲೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಮತ್ತು ಕಾನೂನು ಉಲ್ಲಂಘಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಕಾರ್ಮಿಕ ಇಲಾಖೆಯಿಂದ ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಕ್ರಿಯಾ ಯೋಜನೆಯ ಅನುಷ್ಠಾನ ಪ್ರಗತಿ ಪರಿಶೀಲನೆ ಕುರಿತಂತೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಜಂಟಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೋಟೆಲ್‌ಗಳು, ಗ್ಯಾರೇಜ್‌ಗಳು, ಇಟ್ಟಿಗೆ ಭಟ್ಟಿಗಳು, ವಾಣಿಜ್ಯ ಸಂಕೀರ್ಣಗಳು ಹಾಗೂ ಕೈಗಾರಿಕಾ ಪ್ರದೇಶಗಳಲ್ಲಿ ಕಾರ್ಮಿಕ ಇಲಾಖೆಯೊಂದಿಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ನಿರಂತರ ಕಾರ್ಯಾಚರಣೆ ನಡೆಸಬೇಕು. ದಿಢೀರ್ ದಾಳಿ ನಡೆಸಿ ಪರಿಶೀಲಿಸಬೇಕು. ಪ್ರತಿ ತಾಲ್ಲೂಕಿನಲ್ಲಿ ಪ್ರತಿ ತಿಂಗಳಿಗೆ ಕನಿಷ್ಠ 4 ದಾಳಿಗಳನ್ನು ನಡೆಸಬೇಕು. ದಾಳಿಯ ಸಂದರ್ಭದಲ್ಲಿ ರಕ್ಷಿಸಲ್ಪಟ್ಟ ಬಾಲಕಾರ್ಮಿಕರಿಗೆ ಕೇವಲ ಮುಕ್ತಿ ಕೊಡಿಸಿದರೆ ಸಾಲದು, ಅವರಿಗೆ ಸೂಕ್ತ ಉಚಿತ ಶಿಕ್ಷಣ, ವಸತಿ ಹಾಗೂ ಸರ್ಕಾರಿ ಸೌಲಭ್ಯಗಳ ಮೂಲಕ ಗೌರವಾನ್ವಿತ ಪುನರ್ವಸತಿ ಕಲ್ಪಿಸುವುದು ಅತೀ ಮುಖ್ಯ. ಸಾರ್ವಜನಿಕರಲ್ಲಿ ಮತ್ತು ಮಾಲೀಕರಲ್ಲಿ ಬಾಲಕಾರ್ಮಿಕ ಕಾಯ್ದೆಯ ಬಗ್ಗೆ ಅರಿವು ಮೂಡಿಸಲು ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಫ್ಲೆಕ್ಸ್, ಬ್ಯಾನರ್ ಹಾಗೂ ಕರಪತ್ರಗಳನ್ನು ಹಂಚುವುದು, ಡಂಗೂರ ಸಾರುವುದರ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು. ಪ್ರತಿ ಮಗುವಿಗೂ ಅದರ ಬಾಲ್ಯ ಮತ್ತು ಅಗತ್ಯ ಶಿಕ್ಷಣವನ್ನು ಪಡೆಯುವ ಹಕ್ಕಿದೆ. ಆದ್ದರಿಂದ ಜಿಲ್ಲೆಯಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಂಬಂಧಿಸಿದ ಎಲ್ಲ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜೂನ್ 12 ರಂದು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರೋಧಿ ದಿನವನ್ನು ಆಚರಿಸಲಾಗುತ್ತಿದ್ದು, ಅಂದು ಜಿಲ್ಲಾಡಳಿತದಿಂದ ಬಾಲ ಕಾರ್ಮಿಕ ಪದ್ಧತಿ ವಿರೋಧಿ ಪ್ರತಿಜ್ಞೆಯನ್ನು ಸ್ವೀಕರಿಸಲಾಗುವುದು. ಅದರಂತೆ ಜಿಲ್ಲೆಯ ಎಲ್ಲ ಕಚೇರಿಗಳಲ್ಲಿಯೂ ಪ್ರತಿಜ್ಞಾ ವಿಧಿ ಸ್ವೀಕರಿಸಬೇಕು. ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಜಿಲ್ಲೆಯ ಶಾಲಾ ಕಾಲೇಜುಗಳಲ್ಲಿ ಮಕ್ಕಳಿಗೆ ಪ್ರಬಂಧ, ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಯನ್ನು ಆಯೋಜಿಸಬೇಕು. ಜಿಲ್ಲೆಯಲ್ಲಿ ಬಾಲಕಾರ್ಮಿಕರು ಪತ್ತೆಯಾದ ಕಾರ್ಖಾನೆ, ಅಂಗಡಿ ಮಾಲೀಕರ ವಿರುದ್ಧ ಎಫ್‌ಐಆರ್ ದಾಖಲಿಸಿ'ಬೇಕು. ನ್ಯಾಯಾಲಯದಲ್ಲಿ ಶಿಕ್ಷೆ ಪ್ರಕಟವಾದ ಬಗ್ಗೆ ಪತ್ರಿಕೆಗಳಲ್ಲಿ ಮಾಹಿತಿ ಪ್ರಚುರಪಡಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಮಾತನಾಡಿ, ಸರ್ಕಾರದ ಎಲ್ಲ ಇಲಾಖೆಗಳಲ್ಲಿರುವ ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಇರುವುದಿಲ್ಲ. ಆದ್ದರಿಂದ ಎಲ್ಲ ಇಲಾಖೆಗಳ ಯೋಜನೆಗಳನ್ನು ಪರಿಷ್ಕರಿಸಿ, ಪ್ರಸ್ತುತ ಚಾಲ್ತಿಯಲ್ಲಿರುವ ಯೋಜನೆಗಳ ಬಗ್ಗೆ ಕೈಪಿಡಿಯನ್ನು ಮುದ್ರಿಸಿ ಜಿಲ್ಲೆಯ ಎಲ್ಲ ಗ್ರಂಥಾಲಯ, ಗ್ರಾಮ ಪಂಚಾಯತಿಗಳಲ್ಲಿ ಸಾರ್ವಜನಿಕರಿಗೆ ಲಭ್ಯವಾಗಿಸಬೇಕು. ಬಾಲ ಕಾರ್ಮಿಕ ಪದ್ಧತಿ ಮಗುವಿನ ಸರ್ವತೋಮುಖ ಬೆಳವಣಿಗೆಗೆ ಮಾರಕವಾಗಿದ್ದು, ದಾಳಿ ನಡೆಸಿ ಮಗುವನ್ನು ರಕ್ಷಿಸಬೇಕು. ಮಗುವಿನ ಪೋಷಕರಿಗೂ ಸೂಕ್ತ ತಿಳುವಳಿಕೆ ನೀಡಿ, ಮಗುವಿಗೆ ಶಿಕ್ಷಣ ದೊರೆಯುವಂತೆ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ, ಬಾಲ ಕಾರ್ಮಿಕ ಯೋಜನೆ ಸೊಸೈಟಿಯ ಯೋಜನಾ ನಿರ್ದೇಶಕರಾದ ಬಸವರಾಜ ಹಿರೇಗೌಡ್ರು, ಕೊಪ್ಪಳ ಸಿಡಿಪಿಓ ಸಿಂಧು ಅಂಗಡಿ, ಶಿಕ್ಷಣ ಇಲಾಖೆಯ ಬಸವರಾಜ ಎ., ಜೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು

ಬಳ್ಳಾರಿ: ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಪರಿಸರ ದಿನಾಚರಣೆ

ಹಸಿರು ಪರಿಸರ ರಕ್ಷಣೆಗೆ ಜಿಲ್ಲಾ ನ್ಯಾಯಾಧೀಶ ಸಿದ್ದಲಿಂಗಪ್ರಭು ಕರೆ



ಬಳ್ಳಾರಿ,ಜೂ.06

ಪರಿಸರವನ್ನು ಉಳಿಸಿ, ಬೆಳೆಸಿ ಹಾಗೂ ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಸಿದ್ದಲಿಂಗಪ್ರಭು ಅವರು ಕರೆ ನೀಡಿದರು.

ಅರಣ್ಯ ಇಲಾಖೆಯ ಬಳ್ಳಾರಿ ಪ್ರಾದೇಶಿಕ ವಿಭಾಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಇವರ ಸಹಯೋಗದಲ್ಲಿ ''ಪ್ರಕೃತಿಯಿಂದ ಪ್ರೇರಿತ, ಹವಾಮಾನಕ್ಕಾಗಿ, ನಮ್ಮ ಭವಿಷ್ಯಕ್ಕಾಗಿ'' ಎಂಬ ಘೋಷವಾಕ್ಯದೊಂದಿಗೆ ಗುರುವಾರ ನಗರದ ತಾಳೂರು ರಸ್ತೆಯಲ್ಲಿನ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಟ್ಟು ನಿರೂಣಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಪರಿಸರ ಮಾಲಿನ್ಯ ತೀವ್ರಗೊಳ್ಳುತ್ತಿರುವುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, ಪ್ರತಿಯೊಬ್ಬ ನಾಗರಿಕನೂ ಕಡ್ಡಾಯವಾಗಿ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕಾದ ಅನಿವಾರ್ಯತೆ ಎದುರಾಗಿದೆ ಎಂದು ಅಭಿಪ್ರಾಯಪಟ್ಟರು.

ಗಿಡ-ಮರಗಳನ್ನು ಬೆಳೆಸುವ ಮೂಲಕ ಪ್ರಕೃತಿಯನ್ನು ಸಮತೋಲನದಲ್ಲಿಡಬೇಕು. ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯಗಳ ಬಳಕೆಯನ್ನು ಕಡಿಮೆ ಮಾಡಿ, ಅವುಗಳನ್ನು ವೈಜ್ಞಾನಿಕ ಹಾಗೂ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡುವುದು ಮುಖ್ಯವಾಗಿದೆ. ನೈಸರ್ಗಿಕ ಇಂಧನ ಸಂಪನ್ಮೂಲಗಳನ್ನು ಮಿತವಾಗಿ ಬಳಸಿ, ಭವಿಷ್ಯದ ಪೀಳಿಗೆಗೆ ಉಳಿಸಬೇಕಾದ ಜವಾಬ್ದಾರಿ ನಮ್ಮ ಮೇಲಿದೆ ಎಂದು ತಿಳಿಸಿದರು. ಮುಂದಿನ ಪೀಳಿಗೆಗೆ ಉತ್ತಮ ಮತ್ತು ಆರೋಗ್ಯಕರ ಪರಿಸರವನ್ನು ಕೊಡುಗೆಯಾಗಿ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಸಾರ್ವಜನಿಕರು ಪರಿಸರ ಜಾಗೃತಿ ಮೂಡಿಸುವಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಒಂದನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೆಚ್.ಎ ಮೋಹನ್ ಅವರು ಮಾತನಾಡಿ, ಮಾನವನ ಹಸ್ತಕ್ಷೇಪ ಹಾಗೂ ನಗರೀಕರಣದಿಂದಾಗಿ ಪರಿಸರವು ದಿನೇ ದಿನೇ ನಾಶವಾಗುತ್ತಿದೆ. ನಾವು ಚಿಕ್ಕವರಿದ್ದಾಗ ಕಾಲುವೆಗಳಲ್ಲಿ ಶುದ್ಧವಾದ ಕುಡಿಯುವ ನೀರು ಸಿಗುತ್ತಿತ್ತು. ಆದರೆ ಇಂದು ಕೈಗಾರಿಕೀಕರಣ ಹಾಗೂ ಮಾನವನ ಬೇಜವಾಬ್ದಾರಿತನದಿಂದಾಗಿ ನಮಗೆ ಶುದ್ಧವಾದ ಗಾಳಿ ಮತ್ತು ನೀರು ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಕೇವಲ ಸರ್ಕಾರ ಅಥವಾ ಇಲಾಖೆಗಳು ಮಾತ್ರ ಪರಿಸರ ಕಾಳಜಿ ವಹಿಸಿದರೆ ಸಾಲದು; ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ನಾಗರಿಕನೂ ಪರಿಸರ ರಕ್ಷಣೆಯ ಜವಾಬ್ದಾರಿಯನ್ನು ಹೊರಬೇಕಾಗಿದೆ ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ ಅವರು ಮಾತನಾಡಿ, ಜಾಗತಿಕ ತಾಪಮಾನ ಹಾಗೂ ಹವಾಮಾನ ವೈಪರೀತ್ಯದ ಈ ಕಾಲಘಟ್ಟದಲ್ಲಿ ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಕೆಲಸವಲ್ಲ, ಅದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ. ಪ್ರಸ್ತುತ ಜಗತ್ತು ಪರಿಸರ ಮಾಲಿನ್ಯದಿಂದಾಗಿ ಕಠಿಣ ಹಂತವನ್ನು ಎದುರಿಸುತ್ತಿದ್ದು, ಪ್ರಕೃತಿಯನ್ನು ರಕ್ಷಿಸಲು ತಕ್ಷಣದ ಕ್ರಮಗಳು ಅತ್ಯಗತ್ಯ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 2ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಪ್ರಮೋದ.ಬಿ.ಜಿ., 3ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಜಿಲ್ಲಾ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ವೆಂಕಟೇಶ್, ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರು ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಪ್ರಿಯಾಂಕ ಟಿ.ಕೆ., ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1ನೇ ಅಪರ ಸಿವಿಲ್ ನ್ಯಾಯಾಧೀಶರಾದ ಸಿದ್ದಲಿಂಗಯ್ಯ ಗಂಗಾಧರಮಠ, 2ನೇ ಅಪರ ಸಿವಿಲ್ ನ್ಯಾಯಾಧೀಶರಾದ ದೇವರೆಡ್ಡಿ, 3ನೇ ಅಪರ ಸಿವಿಲ್ ನ್ಯಾಯಾಧೀಶರಾದ ವಿನುತಾ ಬಿ.ಎಸ್., 3ನೇ ಅಪರ ಸಿವಿಲ್ ನ್ಯಾಯಾಧೀಶರಾದ ಲಕ್ಷ್ಮಿ ಭವಾನಿ ಶಂಕ್ರಪ್ಪ, ಅರಣ್ಯ ಇಲಾಖೆಯ ಅಧಿಕಾರಿ ದಾನನಗೌಡ ವಿ.ಪಾಟೀಲ್ ಸೇರಿದಂತೆ ನ್ಯಾಯಾಂಗ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಇದ್ದರು.



ಹವಾಮಾನ ಬದಲಾವಣೆಯ ಕಾರ್ಯಕ್ಷಮತೆಗಳ ಅಳವಡಿಕೆಗೆ ವರದಿ ತಯಾರಿಸಿ: ಡಾ. ಸುರೇಶ್ ಇಟ್ನಾಳ

ಕೊಪ್ಪಳ ಜೂ.06

ಕೊಪ್ಪಳ ಜಿಲ್ಲೆಗೆ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆಯ ಕಾರ್ಯಕ್ಷಮತೆಗಳನ್ನು ಅಳವಡಿಸಿಕೊಳ್ಳುವುದರ ಬಗ್ಗೆ ವರದಿಯನ್ನು ತಯಾರಿಸಬೇಕೆಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದೊಂದಿಗೆ ಶುಕ್ರವಾರ (ಜೂನ್ 5ರಂದು) ಕೊಪ್ಪಳ ಜಿಲ್ಲಾ ಪಂಚಾಯತ್ ಸಮಿತಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಹವಾಮಾನ ಬದಲಾವಣೆ ಕುರಿತಾದ ತರಬೇತಿ ಕಾರ್ಯಗಾರದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆಯ ಕಾರ್ಯಕ್ಷಮತೆ ಸೂಚಕಗಳ ಬಗ್ಗೆ ಇಲಾಖಾ ಅಧಿಕಾರಿಗಳು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ. ಕೊಪ್ಪಳ ಜಿಲ್ಲೆಗೆ ಈ ಕಾರ್ಯಕ್ಷಮತೆಗಳನ್ನು ಅಳವಡಿಸಿಕೊಳ್ಳುವುದಕ್ಕಾಗಿ ಸೂಕ್ತ ವರದಿಯನ್ನು ತಯಾರಿಸಲು ತಾವುಗಳು ಶ್ರಮಿಸಬೇಕು. ಇದರ ಜೊತೆಗೆ ಹೊಸ ತಂತ್ರಜ್ಞಾನಗಳ ಮೂಲಕ ತ್ಯಾಜ್ಯ ನಿರ್ವಹಣೆ ಮತ್ತು ತ್ಯಾಜ್ಯದಿಂದ ಇಂಧನ ಉತ್ಪಾದನೆಗೆ ಆದ್ಯತೆ ನೀಡಬೇಕು. ನದಿ, ಕೆರೆಗಳ ನೀರಿನ ಗುಣಮಟ್ಟದ ಕಾಪಾಡುವುದು, ಮಾಲಿನ್ಯ ತಡೆಗಟ್ಟಲು ಪರಿಸರವನ್ನು ಸುಸ್ಥಿರವಾಗಿಡಲು ಮತ್ತು ಹಸಿರು ಇಂಧನಗಳ ಬಳಕೆಯನ್ನು ಹೆಚ್ಚಿಸಲು ನಾವೆಲ್ಲರೂ ಕೈಜೊಡಿಸಬೇಕೆಂದರು ಅಭಿಪ್ರಾಯ ವ್ಯಕ್ತಪಡಿಸಿದರು.

ಎಂಪ್ರಿ ಸಂಸ್ಥೆ ಬೆಂಗಳೂರಿನ ಹಿರಿಯ ಸಮಾಲೋಚಕರಾದ ಡಾ. ಬಿ. ಸರಿತಾ ಅವರು ಹವಾಮಾನ ಬದಲಾವಣೆ ಕುರಿತು ಕರ್ನಾಟಕ ಕ್ರಿಯಾ ಯೋಜನೆ ಬಗ್ಗೆ ಸುದೀರ್ಘವಿವರಣೆ ನೀಡಿದರು. ಜೊತೆಗೆ ಕಾರ್ಯನಿರ್ತಿ, ಕಾರ್ಯತಂತ್ರಗಳು ಮತ್ತು ವಿವಿಧ ಇಲಾಖೆಗಳ, ಸಂಘ-ಸಂಸ್ಥೆಗಳ ಕರ್ತವ್ಯವನ್ನು ವಿವರಿಸಿದರು ಹಾಗೂ ಅಲ್ಪಾವಧಿ ಹವಾಮಾನ ಮಾಲಿನ್ಯ ಕಾರಕಗಳ ಪರಿಣಾಮಗಳು ಮತ್ತು ಕೊಪ್ಪಳ ಜಿಲ್ಲೆಯಲ್ಲಿನ ಅವುಗಳ ದತ್ತಾಂಶಗಳ ಕುರಿತು ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಾದ ಶಶಿಕುಮಾರ್ ಅಭ್ಯರ್ಥಿಗಳಿಗೆ ಜಲ ಸಂಪನ್ಮೂಲ ವಲಯದ ಹವಾಮಾನ ಕ್ರಿಯಾ ಯೋಜನೆ ಕುರಿತು ಮಾಹಿತಿ ನೀಡಿದರು.

ಕೊಪ್ಪಳ ಜಿಲ್ಲೆಯ ಎನ್.ಆರ್.ಡಿ.ಎಂ.ಎಸ್ ಅಧಿಕಾರಿಗಳಾದ ಗುರುಸ್ವಾಮಿಪಿ ಅವರು, ಅಭ್ಯರ್ಥಿಗಳಿಗೆ ಎನ್.ಆರ್.ಡಿ.ಎಂ.ಎಸ್ ಕೇಂದ್ರದ ಕುರಿತು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಜಗದಾಂಬ ಅವರು ಉಪಸ್ಥಿತರಿದ್ದರು. ಲತ ಎಂ.ಎಚ್ ಅವರು ಕಾರ್ಯಕ್ರಮ ನಿರೂಪಿಸಿದರು.

ಒಂದನೇಯ ಪುಟದಿಂದ

ರಾಮಲಿಂಗಾರೆಡ್ಡಿ ಕಾಂಗ್ರೆಸ್ ಪಕ್ಷದ ಆಸ್ತಿ, ಅವರು ರಾಜೀನಾಮೆ ಹಿಂಪಡೆದಿದ್ದಾರೆ: ಸುರ್ಜೇವಾಲಾ

ನಾನು ನನ್ನ ಅಭಿಪ್ರಾಯ ಹೇಳಿರುವೆ. ಶುಕ್ರವಾರ ರಾತ್ರಿ ತಮ್ಮನ್ನು ಭೇಟಿಯಾದ ಸಿಎಂ ಡಿಕೆ ಶಿವಕುಮಾರ್ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರ ಮುಂದೆಯೂ ಅದನ್ನೇ ಹೇಳಿರುವೆ. ಅವರು ಯಾವ ತೀರ್ಮಾನ ತೆಗೆದುಕೊಳ್ಳುತ್ತಾರೋ ನೋಡೋಣ. ಅವರ ಅಭಿಪ್ರಾಯಕ್ಕಾಗಿ ಕಾಯುತ್ತಿರುವೆ ಎಂದು ಹೇಳಿದ್ದರು. ರಾಮಲಿಂಗಾರೆಡ್ಡಿಯವರ ರಾಜೀನಾಮೆ ಕುರಿತು ಇಂದು ಬೆಳಿಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ್ದ ಸಿಎಂ ಡಿ.ಕೆ.ಶಿವಕುಮಾರ್, ರಾಮಲಿಂಗಾರೆಡ್ಡಿ ಅವರು ನನ್ನ ಸ್ನೇಹಿತರು, ಅವರೊಂದಿಗೆ ಮಾತನಾಡಿ ಎಲ್ಲಾ ಸಮಸ್ಯೆ ಬಗೆಹರಿಸಲಾಗಿದೆ. ಯಾವುದೇ ಕಾರಣಕ್ಕೂ ಅವರ ರಾಜೀನಾಮೆ ಅಂಗೀಕರಿಸುವುದಿಲ್ಲ. ರಾಮಲಿಂಗಾ ರೆಡ್ಡಿ ಅವರಿಗೆ ಮಾತು ಕೊಟ್ಟಿರುವುದು ನಿಜ ಎಂದು ಹೇಳಿದ್ದರು.

ಮುಸ್ಲಿಂ ಸಮುದಾಯದ ಆಕ್ರೋಶ ಸ್ಫೋಟ ಜಮೀರ್ ಖಾನ್ ಸಚಿವ ಸಂಪುಟದಲ್ಲಿ ಮುಂದುವರಿಸಲು ಒತ್ತಾಯ

ಪಾಶಾ, ಹಬೀಬ್ ಗೋನಾಳ್, ಫಾರೂಕ್ ಯರಗೇರ ಸೇರಿದಂತೆ ಮುಸ್ಲಿಂ ಸಮಾಜದ ಮುಖಂಡರು, ಧಾರ್ಮಿಕ ಗುರುಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಪ್ರತಿ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ: ಉಪ ಆಯುಕ್ತ ಶರಣಪ್ಪ

ಹಾಕಿಸಲು ಇಂದಿನಿದಲೇ ವ್ಯಾಪಕ ಪ್ರಚಾರ ಮಾಡೋಣವೆಂದರು.

ನಗರ ಪ್ರದೇಶದಲ್ಲಿ 37,983 ಮಕ್ಕಳಿಗೆ ಲಸಿಕೆ ಹಾಕಲು ಜನನಿಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ರೈಲು ನಿಲ್ದಾಣ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 9 ಟ್ರಾನ್ಸಿಟ್ ತಂಡಗಳು, 01 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 146 ತಂಡಗಳು ಕಾರ್ಯನಿರ್ವಹಿಸುತ್ತಿರುವದಕ್ಕೆ ಬೆಂಬಲವಾಗಿ ನಗರದಲ್ಲಿ ಪ್ರಚಾರಕ್ಕಾಗಿ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಹಾಗೂ ಬ್ಯಾನರ್, ಪ್ಲೇಕ್ಸ್ ಅಳವಡಿಕೆ, ತಂಡದ ಸದಸ್ಯರಿಗೆ ಅಹಾರ ಪೊಟ್ಟಣ ವಿತರಣೆ ಕೈಗೊಳ್ಳಲಾಗುವುದು. ಅಲ್ಲದೆ ಮಹಾನಗರ ಪಾಲಿಕೆಯಡಿ ಆಯುಕ್ತರ ಮಾರ್ಗದರ್ಶನದಲ್ಲಿ ಎಲ್ಲ ಸಹಕಾರ ನೀಡಲಾಗುವುದು ಎಂದರು.

ಈ ವೇಳೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ 76,502 ಮಕ್ಕಳಿಗೆ ಲಸಿಕೆ ಹಾಕಲು ಜನನಿಬಿಡ ಪ್ರದೇಶವಾದ ಸಂತೆ ಮಾರುಕಟ್ಟೆ, ಬಸ್ ನಿಲ್ದಾಣ ಮುಂತಾದವುಗಳಲ್ಲಿ ಲಸಿಕೆ ಹಾಕಲು 16 ಟ್ರಾನ್ಸಿಟ್ ತಂಡಗಳು ಹಾಗೂ ವಲಸೆ ಪ್ರದೇಶ, ಕಟ್ಟಡ ಕಾಮಗಾರಿ, ಇಟ್ಟಿಗೆ ಬಟ್ಟಿ, ಕಬ್ಬು ಕಡೆಯುವ ಜಾಗೆ, ಕುರಿಹಟ್ಟಿ, ಕೊಳಚೆ ಪ್ರದೇಶ, ತೋಟದ ಮನೆ, ಮುಂತಾದ ಸ್ಥಳಗಳಲ್ಲಿರುವ ಲಸಿಕೆ ಹಾಕಲು 03 ಸಂಚಾರಿ ತಂಡ ಹಾಗೂ ಮನೆ ಬೇಟಿಗಾಗಿ 316 ತಂಡಗಳು ಕಾರ್ಯ ನಿರ್ವಹಿಸುತ್ತಿದ್ದು, ಬೆಂಬಲವಾಗಿ ಗ್ರಾಮೀಣ ಪ್ರದೇಶದಲ್ಲಿ ಪ್ರಚಾರಕ್ಕಾಗಿ ಗ್ರಾಮ ಪಂಚಾಯತಗಳ ತ್ಯಾಜ್ಯ ವಿಲೇವಾರಿ ವಾಹನಗಳ ಮೂಲಕ ಜಿಂಗಲ್ಸ್ ಅಂಗನವಾಡಿ ಪೂರ್ವ ಪ್ರಾಥಮಿಕ ಹಂತದ ಎಲ್ಲ ನರ್ಸರಿ, ಕಿಡರ್ ಗಾರ್ಟನ್, ಬೆಬಿ ಸಿಟ್ಟಿಂಗ್‌ನಲ್ಲಿಯ ಮಕ್ಕಳಿಗೆ ಎರಡು ದಿನ ಮೊದಲು ಲಸಿಕೆ ಹಾಕಲು ಸಿದ್ದತೆ ಕೈಗೊಳ್ಳಲು ನಿರ್ದೇಶನ ನೀಡಲಾಯಿತು.

ಶಾಲೆ, ಅಂಗನವಾಡಿಗಳಲ್ಲಿ ಬೂತ್ ಇರುವ ಸ್ಥಳಗಳಲ್ಲಿ ಮೊದಲೆ ಸ್ವಚ್ಚಗೊಳಿಸಿಡಲು ಸಂಭದಿಸಿದವರು ಕ್ರಮವಹಿಸಲು ಹಾಗೂ ಶಾಲಾ ಮಕ್ಕಳ ಜಾಥಾ ಹಮ್ಮಿಕೊಳ್ಳಲು ತಹಶೀಲ್ದಾರರು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಹಾಗೂ ಪಾಲಿಕೆಯ ಅರೋಗ್ಯ ಅಧಿಕಾರಿ ಡಾ ಮಹಮ್ಮದ್ ಶಾಕೀರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಚಂದ್ರಶೇಖರಯ್ಯ ಸ್ವಾಮಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ಅಮೃತ ಹುಕ್ಕೇರಿ, ಪರಿಸರ ಅಭಿಯಂತರರು ಜಯಪಾಲರೆಡ್ಡಿ, ಆಯುಷ್ ಇಲಾಖೆಯ ಡಾ.ಪೂಜಾ, ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಶಿಕ್ಷಣ ಇಲಾಖೆಯ ಟಿಪಿಓ ಭಾಸ್ಕರ್ ಕುಮಾರ್, ಡಿವೈಹೆಚ್‌ಇಓ ಬಸಯ್ಯ, ಐಸಿಡಿಎಸ್‌ನ ಚನ್ನಮ್ಮ, ಆರ್‌ಟಿಓ ಕಚೇರಿಯ ಅರ್ಜುನ ಚೌವ್ಹಾಣ್, ಬಿಸಿಎಮ್ ಇಲಾಖೆಯ ಈರಣ್ಣ ಪತ್ತಾರ, ಹಿರಿಯ ಹೆಚ್‌ಐಓ ಸುರೇಶ, ಬಿಹೆಚ್‌ಇಓ ಸರೋಜಾ ಕೆ, ಹಿರಿಯ ಪಿಹೆಚ್‌ಸಿಓ ಈರಮ್ಮ, ಪಾಲಿಕೆ ನೈರ್ಮಲ್ಯ ನಿರೀಕ್ಷಕರಾದ ತಿಕ್ಕಾರೆಡ್ಡಿ, ರಾಮಚಂದ್ರ, ಆಕಾಶ ಪಾಟೀಲ್, ಬಿಪಿಎಮ್ ವರಲಕ್ಷ್ಮಿ, ನಂದಿನಿ ಕಾಲೇಜಿನ ಎಸ್ ರೇಹಾನ್, ಎಮ್‌ಟಿಎಸ್ ಸಂಧ್ಯಾ, ಹಾಗೂ ಆರ್‌ಸಿಹೆಚ್ ವಿಭಾಗದ ರವಿ, ನರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ರಾಘವೇಂದ್ರ ಹಿಟ್ನಾಳ್‌ಗೆ ಸಚಿವ ಸ್ಥಾನ ನೀಡದಿದ್ದರೆ ರಾಜಕೀಯ ಪರಿಣಾಮ: ಕುರುಬ ಮುಖಂಡರ ಎಚ್ಚರಿಕೆ

ಕುರುಬ ಸಮಾಜದ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಪಕ್ಷವು ಗಂಭೀರ ರಾಜಕೀಯ ಪರಿಣಾಮಗಳನ್ನು ಎದುರಿಸಬೇಕಾಗಬಹುದು ಎಂದು ಮುಖಂಡರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಶೇಖರ್ ಗೌಡ, ಎಸ್. ರಾಮ್ಮಣ್ಣ, ಶಂಕರ್ ಪಾಟೀಲ್, ಶರಣಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಆತ್ಮನಿರ್ಭರ ಭಾರತ ಮಿಷನ್ ಅಡಿಯಲ್ಲಿ ರೈತರಿಗೆ ದ್ವಿದಳ ಬಿತ್ತನೆ ಬೀಜ ವಿತರಣೆ

ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಕೃಷಿಯನ್ನು ಲಾಭದಾಯಕ ಉದ್ಯಮವಾಗಿ ಪರಿವರ್ತಿಸುವಂತೆ ಮನವಿ ಮಾಡಿಕೊಂಡರು.

ಈ ವೇಳೆ ರಾಯಚೂರು ತಾಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ದೀಪಾ ಎಲ್., ಅವರು ಮಾತನಾಡಿ, ದ್ವಿದಳ ಧಾನ್ಯಗಳ ಬೇಡಿಕೆ ಹೆಚ್ಚುತ್ತಿದ್ದು, ರೈತರು ಸುಧಾರಿತ ತಳಿಗಳ ಅಳವಡಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಅವರು ಹೇಳಿದರು.

ಅಧಿಕ ಇಳುವರಿ ನೀಡುವ, ಹವಾಮಾನ ವೈಪರೀತ್ಯಗಳನ್ನು ಸಹಿಸಬಲ್ಲ, ಕೀಟ ಹಾಗೂ ರೋಗ ನಿರೋಧಕ ಗುಣಗಳನ್ನು ಹೊಂದಿರುವ ಪ್ರಮಾಣಿತ ಬೀಜಗಳನ್ನು ರೈತರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ. ಮುಂಗಾರು ಹಂಗಾಮಿನ ಬಿತ್ತನೆಗೆ ಪೂರಕವಾಗಿ ಬಿತ್ತನೆ ಬೀಜಗಳನ್ನು ಹಾಗೂ ರಸಗೊಬ್ಬರಗಳನ್ನಯ ಅಗತ್ಯವಿರುವಷ್ಟು ದಾಸ್ತಾನು ಮಾಡಿಕೊಳ್ಳಲಾಗಿದೆ. ಕೆ.ಕಿಸಾನ್ ತಂತ್ರಾಂಶದ ಮೂಲಕ ಫ್ರೋಟ್ಸ್ ಎಫ್‌ಐಡಿ ಆಧಾರಿತವಾಗಿ ಯೂರಿಯಾ ರಸಗೊಬ್ಬರ ವಿತರಣೆ ಕಡ್ಡಾಯಗೊಳಿಸಲಾಗಿದೆ. ಯೂರಿಯಾಕ್ಕೆ ಪಯಾಯವಾಗಿ ಸಂಯುಕ್ತ ಗೊಬ್ಬರಗಳ ಬಳಕೆ ಮಾಡವ ಕುರಿತು ರೈತರಿಗೆ ಜಾಗೃತಿಯನ್ನು ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ರೈತ ಸಂಘದ ಅಧ್ಯಕ್ಷ ಲಕ್ಷ್ಮಣ ಗೌಡ ಕಡಗಮದೊಡ್ಡಿ ಸೇರಿದಂತೆ ರೈತ ಉತ್ಪಾದಕ ಸಂಸ್ಥೆಯ ಪ್ರತಿನಿಧಿಗಳು, ಪ್ರಗತಿ ಪರ ರೈತರು ಕಾರ್ಯಕ್ರಮದಲ್ಲಿ ಇದ್ದರು.

ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನಲ್ಲಿ ವಿಶ್ವಪರಿಸರ ದಿನಾಚಾರಣೆ ಆಚರಣೆ

ಆಯುರ್ವೇದಿಕ್ ಕಾಲೇಜಿನ ಪ್ರಾಚಾರ್ಯರಾದ .ಡಾ.ಜೀವನೇಶ್ವರಯ್ಯ,ತಾಲೂಕು ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್, ಮಡಿಲು ಹೆಲ್ತ್ ಕೇರ್ ಆಸ್ಪತ್ರೆಯ ವೈದ್ಯರಾದ ಡಾ.ವಸಂತ, ಸಾಮಾಜಿಕ ಅರಣ್ಯ ವಲಯ ಮಾನ್ವಿ .ವಲಯ ಅರಣ್ಯಾಧಿಕಾರಿಗಳಾದ ಉಮಕಾಂತ, ಪರಿಸರ ಪ್ರೇಮಿ ಸಲಾವುದ್ದೀನ್ , ನ್ಯಾಯಾವಾದಿಗಳಾದ ಯಲ್ಲಪ್ಪ ಬಾದರದಿನ್ನಿ, ಚನ್ನಬಸವನಾಯಕ, ಶಶಿಕಾಂತಯ್ಯಸ್ವಾಮಿ ಸೇರಿದಂತೆ ವಕೀಲರ ಸಂಘದ ಪದಾಧಿಕಾರಿಗಳು , ಕೆ.ಪಿ.ಎಸ್.ವಿ.ಎಸ್. ಆಯುರ್ವೇದಿಕ್ ಕಾಲೇಜಿನ ಉಪನ್ಯಾಸಕರು ಹಾಗೂ ವೈದ್ಯ ವಿದ್ಯಾರ್ಥಿಗಳು ಭಾಗವಹಿಸಿದರು.

ಮಕ್ಕಳಂತೆ ಪಾಲನೆ ಪೋಷಣೆ ಮಾಡೋಣ - ಅಜೀತ್ ಹೊನ್ನಟಗಿ

ಸಂಘಟನೆಯ ಪದಾಧಿಕಾರಿ ಡೇವಿಡ್, ಪತ್ರಕರ್ತರ ಸಂಘದ ತಾಲೂಕ ಅಧ್ಯಕ್ಷ ಹನುಮೇಶ, ಪತ್ರಕರ್ತ ಗುಂಡಪ್ಪ, ಕಾಲೇಜು ಪ್ರಾಚಾರ್ಯರಾದ ಹನುಮಂತ ಚನ್ನೂರು ಅಧ್ಯಕ್ಷತೆವಹಿಸಿದ್ದರು. ಪತ್ರಕರ್ತರಾದ ಮಲ್ಲಪ್ಪ, ಮಹೇಶ, ಉಪನ್ಯಾಸಕರು, ವಿದ್ಯಾರ್ಥಿಗಳು, ಅರಣ್ಯ ಇಲಾಖೆಯ ಸಿಬ್ಬಂದಿ ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಬಂಡಿಹರ್ಲಾಪೂರ ಗ್ರಾಮದಲ್ಲಿ ವಿಶ್ವ ಪರಿಸರ ದಿನಾಚರಣೆ

ವಿದ್ಯಾರ್ಥಿಗೆ ಒಂದು ಮರ ಶಾಲೆಗೊಂದು ವನ ನಿರ್ಮಿಸಿ: ಶರಣಪ್ಪ ಸುಂಕದ



ಕೊಪ್ಪಳ ಜೂ.06

ಮನೆಗೊಂದು ಮರ ಊರಿಗೊಂದು ವನ ಎಂಬಂತೆ ವಿದ್ಯಾರ್ಥಿಗೆ ಒಂದು ಮರ ಶಾಲೆಗೊಂದು ವನ ನಿರ್ಮಿಸಲು ಹೊಸಬಂಡಿಹರ್ಲಾಪುರ್ ಸರ್ಕಾರಿ ಪ್ರೌಢಶಾಲೆ ಮುಖ್ಯೋಪಾಧ್ಯಾಯರಾದ ಶರಣಪ್ಪ ಸುಂಕದ ಅವರು ಹೇಳಿದರು.

ಗ್ರಾಮ ಪಂಚಾಯತ್, ಸರ್ಕಾರಿ ಪ್ರೌಢಶಾಲೆ ಹೊಸ ಬಂಡಿ ಹರ್ಲಾಪುರ್ ಹಾಗೂ ಅರಣ್ಯ ಇಲಾಖೆ ಮುನಿರಾಬಾದ ರವರ ಸಹಯೋಗದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮಕ್ಕೆ ಸಸಿ ನೆಡುವುದರ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ವಿಜ್ಞಾನ ತಂತ್ರಜ್ಞಾನ ಎಷ್ಟೇ ಬೆಳೆದರೂ ಸಹ ನಿಸರ್ಗದಲ್ಲಿನ ಅನೇಕ ಸತ್ಯಗಳನ್ನ ಇದುವರೆಗೂ ಮನುಷ್ಯನು ಅನ್ವೇಷಿಸಲು ಸಾಧ್ಯವಾಗುತ್ತಿಲ್ಲ , ನಿಸರ್ಗ ಅತ್ಯಂತ ನಿಗೂಢವಾದದ್ದು, ಮಾನವ ಪ್ರಾಣಿ ಪಕ್ಷಿಗಳು ವನ್ಯಜೀವಿಗಳು ಸಸ್ಯ ಸಂಪತ್ತುಗಳ ನಡುವಿನ ಸಂಬಂಧವನ್ನು ನಿಖರವಾಗಿ ಹೇಳಲು ಆಗುವುದಿಲ್ಲ.

ಈ ಸಂಬಂಧ ಸರಳವು ಸೂಕ್ಷ್ಮವೂ ಆಗಿರುವುದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯು ಶಾಲೆಯ ಆವರಣದಲ್ಲಿ ಬೆಳೆದಿರುವ ಪ್ರತಿಯೊಂದು ಮರವನ್ನು ನಮ್ಮ ಮನೆಯ ಸದಸ್ಯರಂತೆ ಸಂರಕ್ಷಣೆ ಮಾಡಿ ಅದನ್ನು ಹೆಮ್ಮರವಾಗಿ ಬೆಳೆಸಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ವಲಯ ಅರಣ್ಯ ಅಧಿಕಾರಿಗಳಾದ ಲಿಂಗರಾಜ್ ರವರು ಪರಿಸರದಲ್ಲಿನ ನೆಲ ಜಲ ವನ್ಯ ಸಂಪತ್ತು ಪ್ರಾಣಿ ಸಂಪತ್ತುಗಳ ಕುರಿತು ಮಹತ್ವದ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಶಾಲಾ ಆವರಣದಲ್ಲಿ ಬೇವು, ನೇರಳೆ, ಅರಳೆ ಮರ ಇತ್ಯಾಧಿ ಸಸಿಗಳನ್ನು ನೆಡಲಾಯಿತು.

ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿ ಸಂತೋಷ್, ಪ್ರೌಢ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ರಾಘವೇಂದ್ರ ಇಲ್ಲೂರು, ಪ್ರಾಥಮಿಕ ಶಾಲೆಯ ಎಸ್ಡಿಎಂಸಿ ಅಧ್ಯಕ್ಷರಾದ ಸಿದ್ದಿ ಭಾಷಾ ಗೊರೆಬಾಳ, ಶಿಕ್ಷಕ ಸೆಲ್ವರಾಜನ್ ಸೋಮಪ್ಪ, ಸೈಯದ್ ಮೆಹಬೂಬ್, ರಾಮಣ್ಣ, ನಾಗವೇಣಿ ಸುಮಲತಾ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



ಪ್ರಕೃತಿ ಸಂರಕ್ಷಣೆ ಮತ್ತು ಪೋಷಣೆ ನಮ್ಮೆಲ್ಲರ ಜವಾಬ್ದಾರಿ

ಬಳ್ಳಾರಿ,ಜೂ.06

ನಗರದ ಬಾಲ ಭಾರತಿ ಕೇಂದ್ರೀಯ ವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ವನಮಹೋತ್ಸವ ಕಾರ್ಯಕ್ರಮವನ್ನು ಅತ್ಯಂತ ಸಡಗರ-ಸಂಭ್ರಮದಿದ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶಾಲೆಯ ಆಡಳಿತ ಮಂಡಳಿ ಕಾರ್ಯದರ್ಶಿ ಪ್ರಸನ್ನ.ಜಿ ಅವರು ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಬಳಿಕ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಾವೆಲ್ಲರೂ ಪ್ರಕೃತಿಯಲ್ಲಿನ ಮರ-ಗಿಡಗಳನ್ನು ಹಾಗೂ ನದಿ-ಜಲಗಳನ್ನು ಸಂರಕ್ಷಿಸುವ ಮತ್ತು ಪೋಷಿಸುವ ಜವಾಬ್ದಾರಿಯನ್ನು ಹೊರಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಅವರು ಮನೆಗೊಂದು ಮರ, ಊರಿಗೊಂದು ವನ ಎಂಬ ಜನಪ್ರಿಯ ಘೋಷವಾಕ್ಯ ಸ್ಮರಿಸುತ್ತಾ, ಪರಿಸರ ಸಂರಕ್ಷಣೆಯ ಮಹತ್ವವನ್ನು ಮನವರಿಕೆ ಮಾಡಿಕೊಟ್ಟರು.

ವನಮಹೋತ್ಸವ ಅಂಗವಾಗಿ ಶಾಲೆಯ ಆವರಣದಲ್ಲಿ ವಿವಿಧ ಜಾತಿಯ ಉಪಯುಕ್ತ ಸಸಿಗಳನ್ನು ನೆಡಲಾಯಿತು. ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಪರಿಸರವನ್ನು ಉಳಿಸುವ ಮತ್ತು ಮರ-ಗಿಡಗಳನ್ನು ಸದಾ ಬೆಳೆಸಿ, ಪೋಷಿಸುವ ಜಾಗೃತಿಯ ಹಸಿರು ಸಂಕಲ್ಪ' ತೊಟ್ಟರು.

ಇದೇ ಶುಭ ಸಂದರ್ಭದಲ್ಲಿ ಮಕ್ಕಳ ದೈಹಿಕ ವಿಕಾಸಕ್ಕಾಗಿ ಶಾಲಾ ಆವರಣದಲ್ಲಿ ಹೊಸದಾಗಿ ನಿರ್ಮಿಸಲಾದ ಸುಸಜ್ಜಿತ ಆಟದ ಮೈದಾನವನ್ನು ಕಾರ್ಯದರ್ಶಿ ಪ್ರಸನ್ನ ಜಿ. ಅವರು ರಿಬ್ಬನ್ ಕತ್ತರಿಸುವ ಮೂಲಕ ಅಧಿಕೃತವಾಗಿ ಉದ್ಘಾಟಿಸಿ, ವಿದ್ಯಾರ್ಥಿಗಳಿಗೆ ಸಮರ್ಪಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತ ಮಂಡಳಿಯ ಪದಾಧಿಕಾರಿಗಳು, ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಂಪ್ಲಿ ಕ್ಷೇತ್ರದಲ್ಲಿ ಶೇ.99 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣ: ಚುನಾವಣಾ ನೋಂದಣಾಧಿಕಾರಿ ಕೆ.ಆರ್.ದೇವರಾಜ್



ಬಳ್ಳಾರಿ,ಜೂ.06

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನಲೆಯಲ್ಲಿ ಈಗಾಗಲೇ ಕಂಪ್ಲಿ ಕ್ಷೇತ್ರದಲ್ಲಿ ಶೇ.99 ಮ್ಯಾಪಿಂಗ್ ಕಾರ್ಯ ಮಾಡಲಾಗಿದೆ ಎಂದು ಕ್ಷೇತ್ರ ಚುನಾವಣಾ ನೋಂದಣಾಧಿಕಾರಿಯೂ ಆದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಕೆ.ಆರ್.ದೇವರಾಜ್ ಅವರು ಹೇಳಿದರು.

ಕುರುಗೋಡು ಪಟ್ಟಣದ ತಾಲ್ಲೂಕು ಆಡಳಿತ ಕಚೇರಿಯಲ್ಲಿ ಶುಕ್ರವಾರ ಆಯೋಜಿಸಿದ್ದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ವಿವಿಧ ರಾಜಕೀಯ ಪಕ್ಷದ ಮುಖಂಡರು, ಮಾಧ್ಯಮದವರೊಂದಿಗೆ ಚರ್ಚಿಸಲು ಕರೆದಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಕಂಪ್ಲಿಕ್ಷೇತ್ರದಲ್ಲಿ 247 ಮತಗಟ್ಟೆ ಇದ್ದು, ಮತಗಟ್ಟೆಗೆ ಒಬ್ಬರಂತೆ ಬಿಎಲ್‌ಒಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟು 2.28 ಲಕ್ಷ ಮತದಾರರ ಪೈಕಿ 2700 ಜನರು ಮಾತ್ರ ಮ್ಯಾಪಿಂಗ್ ಕಾರ್ಯದಿಂದ ದೂರ ಉಳಿದಿದ್ದಾರೆ. ಅವರ ಮ್ಯಾಪಿಂಗ್ ಗಾಗಿ ಬಿಎಲ್‌ಒ ಮೂರು ಬಾರಿ ಮನೆಗೆ ಭೇಟಿ ನೀಡಿ ಪರಿಷ್ಕರಿಸುತ್ತಾರೆ. ಅಕ್ಟೋಬರ್ 10 2026ಕ್ಕೆ 18 ವರ್ಷ ಪೂರೈಸಿದ ಪ್ರತಿಯೊಬ್ಬರನ್ನೂ ಮತದಾರರ ಪಟ್ಟಿಗೆ ಕಡ್ಡಾಯವಾಗಿ ಸೇರಿಸಬೇಕು. ಇದಕ್ಕೆ ರಾಜಕೀಯ ಮುಖಂಡರು ಕೂಡ ಸಹಕಾರ ನೀಡಬೇಕು ಎಂದರು.

★ಪರಿಷ್ಕರಣೆ ವೇಳಾಪಟ್ಟಿ★ ಅಧಿಕಾರಿಗಳ ಅಂತಿಮ ಹಂತದ ತರಬೇತಿ ಮುಕ್ತಾಯ: ಜೂನ್ 20, 2026 ರಿಂದ ಜೂನ್ 29, 2026. ಬಿಎಲ್‌ಒಗಳ ಮನೆ ಮನೆ ಭೇಟಿ ಮತ್ತು ಸಮೀಕ್ಷೆ: ಜೂನ್ 30, 2026 ರಿಂದ ಜುಲೈ 21, 2026. ಹೆಚ್ಚುವರಿ ಮತಗಟ್ಟೆಗಳ ಮರುಹಂಚಿಕೆ): ಜುಲೈ 29, 2026. ಪರಿಷ್ಕೃತ ಕರಡು ಮತದಾರರ ಪಟ್ಟಿ ಪ್ರಕಟಣೆ: ಆಗಸ್ಟ್ 5, 2026. ಹಕ್ಕುಗಳು ಮತ್ತು ಆಕ್ಷೇಪಣೆಗಳ ಸಲ್ಲಿಕೆ ಅವಧಿ: ಆಗಸ್ಟ್ 5, 2026 ರಿಂದ ಸೆಪ್ಟೆಂಬರ್ 4, 2026. ನೋಟಿಸ್ ಅವಧಿ ಮತ್ತು ಇತ್ಯರ್ಥ: ಆಗಸ್ಟ್ 5, 2026 ರಿಂದ ಅಕ್ಟೋಬರ್ 3, 2026. ಅಂತಿಮ ಮತದಾರರ ಪಟ್ಟಿ ಅಧಿಕೃತ ಪ್ರಕಟಣೆ: ಅಕ್ಟೋಬರ್ 7, 2026.

ತಹಸೀಲ್ದಾರ್ ನರಸಪ್ಪ ಮಾತನಾಡಿ ರಾಜ್ಯದಲ್ಲಿಯೇ ಕಂಪ್ಲಿ ಕ್ಷೇತ್ರವು ಮ್ಯಾಪಿಂಗ್ ಮಾಡುವಲ್ಲಿ ಉತ್ತಮ ಸಾಧನೆ ಮಾಡಿದೆ. ಸೂಚಿಸಿರುವ ನಿಯಮಾನುಸಾರ ಸಂಬಧಪಟ್ಟ ಎಲ್ಲ ಅಧಿಕಾರಿಗಳು ಪಾರದರ್ಶಕವಾಗಿ ಕೆಲಸ ಮಾಡಬೇಕು. ಅರ್ಹರು ಪಟ್ಟಿಯಿಂದ ಹೊರ ಉಳಿಯದಂತೆ ನೋಡಿಕೊಳ್ಳಬೇಕು. ಮೇಲ್ವಿಚಾರಕರು ಬಿಎಲ್‌ಒ ಕಾರ್ಯದ ಬಗ್ಗೆ ಆಗಾಗ ತಪಾಸಣೆ ಮಾಡಬೇಕು ಎಂದರು. ಸಭೆಯಲ್ಲಿ ತಹಸೀಲ್ದಾರ್ ನರಸಪ್ಪ, ಗ್ರೇಡ್-2 ತಹಸೀಲ್ದಾರ್ ಮಲ್ಲೇಶಪ್ಪ, ಉಪ ತಹಸೀಲ್ದಾರ್ ರಾಜಶೇಖರ್ ಕಂದಾಯ ನಿರೀಕ್ಷಕರಾದ ಸುರೇಶ್, ಭದ್ರಿ, ಶಿರಸ್ತೇದಾರ್ ವಿಜಯ್ ಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಾನಾಳ್ ಚನ್ನಬಸವನಗೌಡ, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಮೇಲಗಿರಿ ಬಸವರಾಜ್ ಸೇರಿದಂತೆ ಇತರರು ಇದ್ದರು.

ಹವಾಮಾನ ಬದಲಾವಣೆಯ ಕ್ರಿಯಾಯೋಜನೆ ತರಬೇತಿ ಕಾರ್ಯಕ್ರಮ



ಕೊಪ್ಪಳ ಜೂ.06

ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದೊಂದಿಗೆ ಹವಾಮಾನ ಬದಲಾವಣೆ ಕುರಿತು ಶುಕ್ರವಾರ (ಜೂನ್ 5ರಂದು) ಜಿಲ್ಲಾ ಪಂಚಾಯತ್ ಸಮಿತಿಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ತರಬೇತಿ ಕಾರ್ಯಾಗಾರವು ಯಶಸ್ವಿಯಾಗಿ ನಡೆಯಿತು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ಅಧಿಕಾರಿಗಳಾದ ಡಿ. ಮಂಜುನಾಥ ಅವರು ಗಿಡಕ್ಕೆ ನೀರೆರೆಯುವುದರ ಮೂಲಕ ಕಾರ್ಯಾಗಾರವನ್ನು ಉದ್ಘಾಟಿಸಿದರು. ಬಳಿಕ ಅವರು, ಹವಾಮಾನ ಬದಲಾವಣೆ ಅಂತರಾಷ್ಟ್ರೀಯ ಮತ್ತು ಸ್ಥಳೀಯವಾಗಿ ಹೇಗೆ ಪರಿಣಾಮ ಬೀರುತ್ತದೆ ಎಂದು ತಿಳಿಸಿದರು ಹಾಗೂ ತರಬೇತಿಯ ಉಪಯೋಗ ಪಡೆಯುವಂತೆ ಶಿಬಿರಾರ್ಥಿಗಳಿಗೆ ತಿಳಿಸಿದರು.

ಎಂಪ್ರಿ ಸಂಸ್ಥೆ ಬೆಂಗಳೂರಿನ ಹಿರಿಯ ಸಮಾಲೋಚಕರಾದ ಡಾ. ಬಿ. ಸರಿತ ಅವರು ಮಾತನಾಡಿ, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಯು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಾಯತ್ತ ಸಂಸ್ಥೆಯಾಗಿದ್ದು, ಕರ್ನಾಟಕ ಸರ್ಕಾರದ ನಿರ್ದೇಶನದಂತೆ ''ಹವಾಮಾನ ಬದಲಾಣೆಯ ಕುರಿತಾದ ಕರ್ನಾಟಕ ರಾಜ್ಯ ಕ್ರಿಯಾಯೋಜನೆ ''ಯನ್ನು ತಯಾರಿಸಿರುವ 2024ರಲ್ಲಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾಣೆ ಮಂತ್ರಾಲಯದಿಂದ ಅನುಮೋದನೆಗೊಂಡಿದೆ. ಹವಾಮಾನ ಬದಲಾಣೆಯ ವರದಿಯಲ್ಲಿನ ಕಾರ್ಯ ಅಂಶಗಳನ್ನು ಆಧಾರವಾಗಿಟ್ಟು ಕೊಂಡುವಿವಿಧ ಇಲಾಖೆಗಳು ಪ್ರಮುಖ ಕಾರ್ಯಕ್ಷಮತೆ ಸೂಚಕಗಳನ್ನು 2025-2030ರ ಅವಧಿಗೆ ಗುರಿಗಳೊಂದಿಗೆ ನಿಗದಪಡಿಸಿವೆ. ಈ ಸೂಚಕಗಳ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಅಧಿಕಾರಿ ವರ್ಗ ಹಾಗೂ ಇತರೆ ಸಂಘ ಸಂಸ್ಥೆಗಳ ಸಾಮರ್ಥ್ಯ ಬೆಳವಣಿಗೆ ಉದ್ದೇಶದೊಂದಿಗೆ ಸಂಸ್ಥೆಯು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯವರ ಸಹಯೋಗದೊಂದಿಗೆ 2026-27ನೇ ಸಾಲಿನಲ್ಲಿ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಈ ವಿಷಯವನ್ನು ವಿಸ್ತರಗೊಳಿಸಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಒಳಗೊಂಡಂತೆ ಹಲವು ಕ್ಷೇತ್ರಗಳ ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಹಾಗೂ ಇತರೆ ಪಾಲುದಾರುಗಳ ಪ್ರತಿನಿಧಿಗಳಿಗೆ ತರಬೇತಿಯನ್ನು ಆಯೋಜಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಇಂದು ಕೊಪ್ಪಳ ಜಿಲ್ಲೆಯಲ್ಲಿ ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಹಾಯಕ ಸಾಂಖ್ಯೀಕ ಅಧಿಕಾರಿಗಳಾದ ಬಸವರಾಜ, ಬೆಂಗಳೂರು ಜಲಸಂಪನ್ಮೂಲ ಇಲಾಖೆಯ ಎ.ಸಿ.ಐ.ಡಬ್ಲ್ಯೂಆರ್.ಎಂ ಶಶಿಕುಮಾರ, ಜಿ.ಪಂ ಜಿಲ್ಲಾ ಎಸ್.ಆರ್.ಡಿ.ಎಂ.ಎಸ್ ಕೇಂದ್ರದ ಯೋಜನಾ ಸಂಯೋಜಕರಾದ ಗುರುಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದು, ಕಾರ್ಯಕ್ರಮದ ಕುರಿತು ಮಾತನಾಡಿದರು.

ಬಸವರಾಜ ಅವರು ತರಬೇತಿಯ ಪ್ರಾಮುಖ್ಯತೆ ಬಗ್ಗೆ ತಿಳಿಸಿದರು. ತರಬೇತಿಯಲ್ಲಿ ಒಟ್ಟು 45 ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಹಲವು ಕ್ಷೇತ್ರಗಳ ಸಂಘ ಸಂಸ್ಥೆಗಳು ಶಿಕ್ಷಣ ಸಂಸ್ಥೆಗಳು ಹಾಗೂ ಇತರೆ ಪಾಲದಾರರುಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು



ಪ್ಲಾಸ್ಟಿಕ್ ನೋಟುಗಳನ್ನು ಪರಿಚಯಿಸಲು ಆರ್‌ಬಿಐ ಚಿಂತನೆ

ಮುಂಬೈ, ಜೂ.6-

ಶೀಘ್ರದಲ್ಲೇ ದೇಶದ ಪಾಲಿಮರ್ ಇಲ್ಲವೇ ಪ್ಲಾಸ್ಟಿಕ್ ನೋಟುಗಳ ಚಲಾವಣೆಗೆ ಬರುವ ಸಾಧ್ಯತೆಗಳಿವೆ.ಪ್ಲಾಸ್ಟಿಕ್ ನೋಟುಗಳನ್ನು ದೇಶದ ಜನರಿಗೆ ಪರಿಚಯಿಸುವ ಪ್ರಸ್ತಾಪವನ್ನು ಭಾರತೀಯ ರಿಸರ್ವ್ ಬ್ಯಾಂಕ್ ಪರಿಗಣಿಸಿದೆ ಎಂದು ತಿಳಿದುಬಂದಿದೆ.

ಪಾಲಿಮರ್ ನೋಟುಗಳನ್ನ ಜಾರಿಗೊಳಿಸಲು ನಾವು ಚಿಂತನೆ ನಡೆಸುತ್ತಿದ್ದೇವೆ. ಇದರ ಸಾಧಕ ಬಾಧಕಗಳ ಬಗ್ಗೆ ನಾವು ಪರಿಶೀಲನೆ ನಡೆಸುತ್ತಿದ್ದೇವೆ. ಈ ಪ್ರಸ್ತಾಪವು ಸದ್ಯ ಪ್ರಾಥಮಿಕ ಹಂತದಲ್ಲಿದ್ದು, ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ. ನಿರ್ಧಾರ ತೆಗೆದುಕೊಂಡ ಬಳಿಕ ಅಧಿಕೃತ ಮಾಹಿತಿ ನೀಡುತ್ತೇವೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಸ್ಪಷ್ಟನೆ ನೀಡಿದ್ದಾರೆ.

ಏನಿದು ಪಾಲಿಮರ್ ನೋಟು?ನಾವು ದಿನನಿತ್ಯ ಬಳಸುವ ಕಾಗದದ ನೋಟುಗಳಿಗಿಂತ ಇವು ಸಂಪೂರ್ಣ ಭಿನ್ನ. ತೆಳುವಾದ, ಸುಲಭವಾಗಿ ಮಡಚಬಹುದಾದ ಮತ್ತು ದೀರ್ಘಕಾಲಿಕ ಬಾಳಿಕೆ ಬರುವ ನೋಟುಗಳು. ಕಾಗದದ ನೋಟುಗಳ ಮುದ್ರಣದ ವೆಚ್ಚ ತೀವ್ರವಾಗಿ ಹೆಚ್ಚಳವಾಗುತ್ತಿರುವುದರಿಂದ ಮತ್ತು ಪ್ರತಿ ವರ್ಷ ಹರಿದ ನೋಟುಗಳನ್ನ ಚಲಾವಣೆಯಿಂದ ಹಿಂಪಡೆಯುತ್ತಿರುವುದನ್ನು ತಡೆಯಲು ಆರ್‌ಬಿಐ ಈ ಪ್ರಮುಖ ನಿರ್ಧಾರ ಕೈಗೊಳ್ಳಲು ಮುಂದಾಗಿದೆ ಎನ್ನಲಾಗಿದೆ. ಪ್ಲಾಸ್ಟಿಕ್ ನೋಟುಗಳ ಪರಿಚಯ ಭಾರತಕ್ಕೆ ಹೊಸದೇನಲ್ಲ.

2014ರಲ್ಲೇ ಕೇಂದ್ರ ಸರ್ಕಾರವು ದೇಶದ ವಿವಿಧೆಡೆ ಈ ಪ್ರಯೋಗ ನಡೆಸಿತ್ತು. ದೇಶದ 5 ಪ್ರಮುಖ ನಗರಗಳಾದ ಮೈಸೂರು, ಕೊಚ್ಚಿ, ಜೈಪುರ, ಶಿಮ್ಲಾ ಮತ್ತು ಭುವನೇಶ್ವರಗಳಲ್ಲಿ ಪ್ರಾಯೋಗಿಕವಾಗಿ 10 ರೂ. ಮುಖಬೆಲೆಯ 100 ಕೋಟಿ ಪ್ಲಾಸ್ಟಿಕ್ ನೋಟುಗಳನ್ನು ಚಲಾವಣೆಗೆ ತರಲಾಗುವುದು ಎಂದು ಸರ್ಕಾರ ಸಂಸತ್ತಿಗೆ ತಿಳಿಸಿತ್ತು.ಪ್ರಸ್ತುತ ಆರ್‌ಬಿಐ ಈ ಯೋಜನೆಯನ್ನು ದೇಶಾದ್ಯಂತ ಜಾರಿಗೊಳಿಸಲು ಚಿಂತನೆ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ನಮ್ಮ ಕೈಗೆ ಕಾಗದದ ನೋಟುಗಳ ಬದಲು ಪ್ಲಾಸ್ಟಿಕ್ ನೋಟುಗಳು ಬಂದರೂ ಅಚ್ಚರಿಪಡಬೇಕಾಗಿಲ್ಲ.

ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಒಳ್ಳೆಯ ಸಂಸ್ಕಾರ ಮೂಡಿಸಿ: ಶ್ರೀಶೈಲಂ ಜಗದ್ಗುರು

ಯಾದಗಿರಿ,ಜೂ.06-

ಪ್ರಸಕ್ತ ದಿನಗಳಲ್ಲಿ ಶಿಕ್ಷಕರು ಜಾಗೃತರಾಗಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಬೋಧನೆ ಮಾಡುವವದರ ಜೊತೆಗೆ ಅವರಲ್ಲಿ ಉತ್ತಮ ಸಂಸ್ಕಾರ ತಮೂಡಿಸಿದ್ದಲ್ಲಿ ಮಾತ್ರ ಬದಲಾವಣೆ ಕಾಣಲು ಸಾಧ್ಯ ಎಂದು ಶ್ರೀಶೈಲಂ 1008 ಜಗದ್ಗುರುಗಳಾದ ಡಾ. ಚನ್ನಸಿದ್ದರಾಮ ಪಂಡಿತರಾಧ್ಯ ಶಿವಾಚಾರ್ಯ ಮಹಾ ಸ್ವಾಮೀಜಿ ನುಡಿದರು.

ಜಿಲ್ಲೆಯ ವಡಗೇರಾ ತಾಲೂಕಿನ ಉಳ್ಳೆ ಸೂಗೂರು ಗ್ರಾಮದಲ್ಲಿರುವ ನೂತನವಾಗಿ ನಿರ್ಮಾಣ ಮಾಡಿರುವ ಜ್ಞಾನಾಮೃತ ಶಾಲೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಪ್ರಸಕ್ತ ದಿನಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮೌಲ್ಯವಿದೆ ಗ್ರಾಮೀಣ ಭಾಗದ ಪೋಷಕರು ತಮ್ಮ ಬದುಕಿನಲ್ಲಿ ಎಷ್ಟೇ ಸಂಕಷ್ಟಗಳು ಎದುರಾದರೂ ತಮ್ಮ ಮಕ್ಕಳಿಗೆ ಗುಣಮಟ್ಟದ ಮೌಲ್ಯಯುತ ಶಿಕ್ಷಣ ಒದಗಿಸುವುದರ ಜೊತೆಗೆ ಹಾಗೂ ಮಾನವೀಯ ಮೌಲ್ಯಗಳನ್ನು ಹಾಗೂ ಬೆಳೆಸಿದಾಗ ಮಾತ್ರ ಅವರು ಭವಿಷ್ಯದಲ್ಲಿ ಒಳ್ಳೆಯ ನಾಗರಿಕರಾಗಿ ರೂಪಗೊಂಡು ಅವರವರ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ಸಮಾಜಕ್ಕೆ ಹಾಗೂ ನಾಡಿಗೆ ತಮ್ಮದೇ ಆದ ಕೊಡುಗೆ ನೀಡುತ್ತಾರೆ ಎಂದು ಸಲಹೆ ನೀಡಿದರು.

ಶೈಕ್ಷಣಿಕವಾಗಿ ಗಿರಿ ಜಿಲ್ಲೆ ಸಾಧನೆ ಮಾಡಬೇಕಾದದ್ದು ಬಹಳಷ್ಟು ಇದೆ ಪ್ರಮಾಣ. ಈ ಭಾಗದಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಾಗಬೇಕು, ಶಿಕ್ಷಣದಿಂದ ಮಾತ್ರ ನಾವು ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಹೇಳಿದರು.

ಈ ಭಾಗದಲ್ಲಿ ವಿಶೇಷವಾಗಿ ಜನರು ಕೃಷಿಯನ್ನು ಅವಲಂಬಿಸಿ ಜೀವನ ಸಾಗಿಸುತ್ತಿದ್ದು,ಮಾನವ ಸಂಪನ್ಮೂಲಕ್ಕೆ ಯಾವುದೇ ಕೊರತೆ ಇಲ್ಲ ಪರಿಣಾಮರ ಪರಿಣಾಮವೇ ಈ ವರ್ಷ ನಡೆದ ದೇಶದ ಪ್ರಮುಖ ಐಎಎಸ್ ಪರೀಕ್ಷೆಯಲ್ಲಿ ಜಿಲ್ಲೆಯ ನಾಲ್ಕು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಪಾಸ್ ಆಗುವ ಮೂಲಕ ಜಿಲ್ಲೆಗೆ ಕೀರ್ತಿ ತಂದಿದ್ದಾರೆ, ಅವರ ಸೇವೆ ಬರುವ ದಿನಗಳಲ್ಲಿ ಈ ಭಾಗಕ್ಕೆ ಸಿಗಲಿ ಎಂದರು.

ಇದು ಬದಲಾವಣೆಯ ಸಂಕೇತ ಗ್ರಾಮೀಣ ಭಾಗದಲ್ಲಿ ಕೂಡ ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ ಶಿಕ್ಷಕರು ಪೋಷಕರು ಅವರ ಪ್ರತಿಭೆಯನ್ನು ಸೂಕ್ಷ್ಮವಾಗಿ ಗಮನಿಸಿ ಅವರ ಗುರಿಯತ್ತ ಪ್ರೋತ್ಸಾಹಿಸಬೇಕು ಜೊತೆಗೆ ಅವರಲ್ಲಿ ಸ್ಪರ್ಧಾತ್ಮಕ ಮನೋಭಾವನೆ ಬೆಳೆಸಬೇಕು ಎಂದು ಕಿವಿಮಾತು ಹೇಳಿದರು

ನಾಡಿನ ಪ್ರಗತಿಗೆ ಖಾಸಗಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಅಪಾರವಾಗಿದೆ ಈ ಹಿಂದೆ ದೇಶದಲ್ಲಿ ಮಠಮಾನ್ಯಗಳು ಶಿಕ್ಷಣ ಮೂಲಕ ವಿದ್ಯಾರ್ಥಿಗಳಲ್ಲಿ ನೈತಿಕ ಶಿಕ್ಷಣ ನೀಡುವುದರ ಜೊತೆಗೆ ಅವರಲ್ಲಿ ಆತ್ಮವಿಶ್ವಾಸದ ಸ್ವಾವಲಂಬನೆ ಬದುಕು ಬದುಕು ರೂಪಿಸಿಕೊಳ್ಳುವತ ಗಮನ ನೀಡಲಾಗಿತ್ತು. ಆದಿಶೆಯಲ್ಲಿ ಈ ಭಾಗದಲ್ಲಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯವರು ಹಾಗೂ ಶಿಕ್ಷಕರ ತಂಡ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಿ ವಿದ್ಯಾರ್ಥಿಗಳ ಪ್ರತಿಭೆಗಳನ್ನು ಗುರುತಿಸಿ ಅವರಲ್ಲಿ ಮೂಡಿಸಿ ಪ್ರೋತ್ಸಾಹವನ್ನು ನೀಡಬೇಕು ಅಷ್ಟೇ ಮಹತ್ವದ್ದಾಗಿದೆ. ಶಾಲೆಗೆ ಹೋಗಿ ಬರುವ ತಮ್ಮ ಮಕ್ಕಳ ಚಟುವಟಿಕೆಗಳ, ಹವ್ಯಾಸಗಳ ಬಗ್ಗೆ ಬಗ್ಗೆ ಗಮನವಿಟ್ಟು ಗಮನವಿರುವ ಮೂಲಕ ಸಕಾಲಕ್ಕೆ ಸಲಹೆ ಸೂಚನೆ



ನೀಡಬೇಕು ಎಂದು ತಿಳಿಸಿದರು.

ಅಲ್ಲದೆ ಆಸಕ್ತಿಯಿಂದ ಕೆಲಸ ಮಾಡುವ ಆಸಕ್ತಿಯಿಂದ ಕೆಲಸ ಮಾಡುವ ಶಿಕ್ಷಕರ ತಂಡ ಕಾರ್ಯನಿರ್ವಹಿಸಬೇಕು ಇದು ಚಿಕ್ಕ ಮಕ್ಕಳ ಪರಿಣಾಮನಿಸಿನ ಮೇಲೆ ಸಕಾರಾತ್ಮಕ ಪರಿಣಾಮ ಬೀರಿ ಅವರಲ್ಲಿ ಶಿಸ್ತು ಜೊತೆಗೆ ಕ್ರೀಡಾಸಕ್ತಿ ಇನ್ನಿತರ ಹವ್ಯಾಸಗಳನ್ನು ಮೈಗೂಡಿಸಿಕೊಂಡು ಅವರು ದೈಹಿಕ ಮಾನಸಿಕ ಸದೃಢತೆ ಕಾಪಾಡಿಕೊಂಡು ಪರಿಶ್ರಮದಿಂದ ಅಧ್ಯಯನ ಮಾಡಿ ಗುರಿ ತಲುಪಿ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗುತ್ತಾರೆ ಎಂದು ಅಭಿಪ್ರಾಯ ಪಟ್ಟರು,

ಜಗತ್ತಿನಲ್ಲಿ ಎಲ್ಲಾ ಸಂಪತ್ತುಗಳಲ್ಲಿ ವಿದ್ಯಾ ಸಂಪತ್ತು ಶ್ರೇಷ್ಟವಾದದ್ದು, ಕಾರಣ ಅದು ಎಲ್ಲಾ ದಾನಗಳಲ್ಲಿಯೂ ಕೂಡ ವಿದ್ಯಾದಾನ ಔತನ್ಯ ಸ್ಥಾನ ಪಡೆದಿದೆ, ನಾವೂ ಆಧ್ಯಾತ್ಮಿಕ ಚಟುವಟಿಕೆಗಳಿಗೆ ಹಾಗೂ ಕೌಟುಂಬಿಕ ಕಾರ್ಯಗಳಿಗೆ ನೀಡುವಷ್ಟು ಗೌರವ ಶಾಲೆಗಳಿಗೆ ನೀಡಬೇಕಾಗಿರುವುದು ಅಗತ್ಯವಾಗಿದೆ, ಇಂದಿನ ಮಕ್ಕಳೇ ಭವಿಷ್ಯದಲ್ಲಿ ಒಳ್ಳೇಯ ನಾಗರಿಕರಾಗಿ ದೇಶದ ಐಕ್ಯತೆಗೆ ಹಾಗೂ ಸಾಮರಸ್ಯಕ್ಕೆ ಶಕ್ತಿ ತುಂಬುತ್ತಾರೆ,

ಇದಿನ ದಿನಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಯ ಶಾಲೆಗಳಲ್ಲಿ ಎಲ್ಲಾ ಪೋಷಕರಿಗೆ ಒಳ್ಳೆಯ ಶಿಕ್ಷಣ ಕೊಡಿಸಬೇಕೆಂಬ ಉದ್ದೇಶವಿರುತ್ತದೆ ಶಾಲಾ ಆಡಳಿತ ಮಂಡಳಿಯವರು ಅಲ್ಲಿನ ಜನರ ಜ ಜೀವನ ಸ್ಥಿತಿಗತಿ ಅರಿತು ಶಾಲಾ ಆಡಳಿತ ಮಂಡಳಿಯವರು ಎಲ್ಲಾ ವರ್ಗದ ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ವಿದ್ಯಾರ್ಥಿಗಳ ಶುಲ್ಕದಲ್ಲಿ ವಿನಾಯಿತಿ ತೋರಬೇಕು ಅದರಿಂದ ಸಿಗುವ ಆತ್ಮ ತೃಪ್ತಿ ಬೇರೆ ಯಾವುದರಿಂದ ನಿಮಗೆ ಸಿಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಒಂದು ಖಾಸಗಿ ಶಿಕ್ಷಣ ನಡೆಸುವ ಕಾರ್ಯ ಒಂದು ಸವಾಲಿನ ಕೆಲಸವಾಗಿದ್ದು ಅದನ್ನು ಗೌರವಯುತವಾಗಿ ಸಮಾಜಕ್ಕೆ ನೀಡುವ ಸೇವೆಯೆಂದು ಸ್ವೀಕರಿಸಿರುವ ಪಂಪನಗೌಡ ಅವರ ತಂಡ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಬಿಜೆಪಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿ, ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬೇರುರಿರುವ ಮೂಢನಂಬಿಕೆಗಳು ತೊಲಗಿಸಲು ಸಾಧ್ಯ, ಹಳ್ಳಿಯಲ್ಲಿಯೇ ಶಾಲೆ ಆರಂಭ ಮಾಡಿರುವುದರಿಂದ ಸುತ್ತ-ಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಅನುಕೂಲವಾಗುವ ಜೊತೆಗೆ ಉತ್ತಮ ಭದ್ರತೆ ಒದಗಿಸಿದಂತಾಗುತ್ತದೆ, ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾಧಾನ ಮಾಡುವ ಅವಕಾಶ ಭಗವಂತ ಕೆಲವರಿಗೆ ನೀಡುತ್ತಾನೆ, ಇದನ್ನು ಶಿಕ್ಷಣ ಸಂಸ್ಥೆಯವರು ಪರಿಣಾಮಕಾರಿಯಾಗಿ ಕೆಲಸ ಮಾಡುವ ಮೂಲಕ ಸದೃಢ ಸಮಾಜ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಬೇಕೆಂದು ಹೇಳಿದರು.

ಇಂದು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಪುರುಷ ಸಮಾನರಾಗಿ ಅಭಿವೃದ್ಧಿ ಸಾಧಿಸಿದ್ದಾರೆ, ಗ್ರಾಮೀಣ ಜನತೆ ತಮ್ಮ ಹೆಣ್ಣು ಮಕ್ಕಳಿಗೆ ತಪ್ಪದೇ ಶಿಕ್ಷಣ ನೀಡಬೇಕು, ಅಲ್ಲದೇ ಅವರು ವಯಸ್ಕರಾಗುವವರೆಗೆ ಯಾವುದೇ ಕಾರಣಕ್ಕೂ ಬಾಲ್ಯ ವಿವಾಹ ಮಾಡಬೇಡಿ, ಅವರು ವಿದ್ಯೆಯಿಂದ ಮಾತ್ರ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳುತ್ತಾರೆ ಎಂದರು.

ಶಹಾಪೂರ ಹಿರೇಮಠದ ಸುಗೂರೇಶ್ವರ ಸ್ವಾಮಿಜಿ ಯಾವುದೇ ಭಾಗದಲ್ಲಾಗಲಿ ಒಳ್ಳೆಯ ಶಿಕ್ಷಣ ಸಂಸ್ಥೆಯಾಗಬೇಕಾದರೆ ಮೊದಲು ಶುದ್ಧವಾದ ಪರಿಸರ ನಿರ್ಮಾಣವಾಗಬೇಕು, ಇಂದೂ ನಮ್ಮಿಂದ ಸಸಿಗಳನ್ನು ನೆಟ್ಟರೆ ಸಾಲದು, ಬರುವ ದಿನಗಳಲ್ಲಿ ಆರಂಭಗೊಂಡ ಶಾಲೆಯ ಸುತ್ತಮುತ್ತ ಒಳ್ಳೆಯ ಗಿಡ ಮರಗಳನ್ನು ಬೆಳೆಸಬೇಕು ಪರಿ ಸರಿದ ಮಹತ್ವ ಕುರಿತು ಇಂದು ಆಚರಿಸಲಾಗುತ್ತಿರುವ ವಿಶ್ವ ಪರಿಸರ ದಿನಾಚರಣೆಯ ಸಂದೇಶವನ್ನು ತಲುಪಿಸಿದಂತಾಗುತ್ತದೆ ಎಂದು ಹೇಳಿದರು.

ವೇದಿಕೆ ಮೇಲೆ ನಿಲಗಲ್‌ದ ರೇಣುಕಾ ಶಾಂತಮಲ್ಲ ಶಿವಾಚಾರ್ಯರು, ದೇವತ್ಕಲ್‌ನ ಸಾಬಣ್ಣ ಪೂಜಾರಿ, ಮುಖಂಡರಾದ ಶ್ರೀನಿವಾಸರಡ್ಡಿ ಪಾಟೀಲ್ ಚನ್ನೂರ, ಸಿದ್ದಣ್ಣಗೌಡ ಕಾಡಂನೋರ, ಬಸ್ಸು ಗೌಡ ಬಿಳ್ಹಾರ, ದಂಡಪ್ಪಗೌಡ ಉಳ್ಳೆಸೂಗೂರ, ವಿಶ್ವನಾಥರಡ್ಡಿ ನಾಯ್ಕಲ್, ರುದ್ರಗೌಡ ದೇವರಗುಡ್ಡ, ಬಸವಂತರಡ್ಡಿ ಮಲ್ಹಾರ, ಸದಾಶಿವಪ್ಪಗೌಡ ರೊಟ್ನಡಗಿ, ಬಸರಾಜಪ್ಪಗೌಡ ದಳಪತಿ ಮುಸ್ಟೂರ, ಡಾ. ರಾಹುಲ್ ನಾಯ್ಕೋಡಿ, ಡಾ. ಶಿವಪುತ್ರರಡ್ಡಿ, ಶಿವುಗೌಡ ಕೊಂಗಡಿ, ಮಾಣಿಕರಡ್ಡಿ ಕುರಕುಂದಿ, ಸಿದ್ದಲಿಂಗರಡ್ಡಿ ಕೌಳೂರ, ಶಿಕ್ಷಣ ಸಂಸ್ಥೆಯ ಗೌರವಾಧ್ಯಕ್ಷರಾದ ಪಂಪಣ್ಣಗೌಡ ಶಾಂತವೀರ ಉಳ್ಳೆಸೂಗೂರ, ಬಸರಾಜಪ್ಪಗೌಡ ಗುರುಸಣಗಿ, ಪ್ರಮೋದ ಕುಲಕರ್ಣಿ, ಮಹಿಪಾಲರಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು,

ನಿವೃತ್ತ ಬ್ಯಾಂಕ್ ಅಧಿಕಾರಿ ಬಾಲಪ್ಪ ಆರಂಭದಲ್ಲಿ ಸಂವಿದಾನ ಪಿಠೀಕೆ ವಾಚಿಸಿದರು. ಶಂಕರ ಸೋನಾರ್ ನಿರೂಪಿಸಿ, ವಂದಿಸಿದರು.



ಚಿಕ್ಕಬೆಣಕಲ್ ಗ್ರಾಮದಲ್ಲಿ ರೇಬೀಸ್ ಜಾಗೃತಿ ಕಾರ್ಯಕ್ರಮ

ಕೊಪ್ಪಳ ಜ.06

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ವೆಂಕಟಗಿರಿ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ (ಜೂ. 3 ರಂದು) ಚಿಕ್ಕಬೆಣಕಲ್ ಗ್ರಾಮ ಪಂಚಾಯತ್ ಕಾರ್ಯಾಲಯದ ಆವರಣದಲ್ಲಿ ರೇಬೀಸ್ (ನಾಯಿ ಕಡಿತ) ಜಾಗೃತಿ ಕಾರ್ಯಕ್ರಮ ನಡೆಯಿತು.

ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ದೇವಮ್ಮ ಅವರು ಕಾರ್ಯಕ್ರಮ ಕುರಿತು ಮಾತನಾಡಿ, ನಾಯಿ ಕಡಿತದಿಂದ ಸಾರ್ವಜನಿಕರು ಜಾಗೃತರಾಗಬೇಕು. ಈ ಹಿನ್ನೆಲೆಯಲ್ಲಿ ರೇಬೀಸ್ ಖಾಯಿಲೆಯಿಂದ ಉಂಟಾಗುವ ಸಾವು-ನೋವುಗಳನ್ನು ತಡೆಗಟ್ಟುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ರೇಬೀಸ್ ವೈರಸ್ ಸೋಂಕಿತ ಪ್ರಾಣಿಗಳು ಮನುಷ್ಯರಿಗೆ ಕಚ್ಚುವುದರಿಂದ ಹರಡುತ್ತದೆ. ಹೆಚ್ಚು ಪ್ರಮಾಣದಲ್ಲಿ ಬೀದಿನಾಯಿಗಳ ಕಡಿತದಿಂದ ಸಂಬಂಧಿಸುತ್ತದೆ ಎಂದರು.

ಯಾರಿಗಾದರು ಒಂದುವೇಳೆ ನಾಯಿ ಕಚ್ಚಿದರೆ, ಆ ಜಾಗವನ್ನು ಸೋಪು ಮತ್ತು ಶುದ್ದ ಹರಿಯುವ ನಲ್ಲಿ(ನಳ) ನೀರಿನಲ್ಲಿ 15 ನಿಮೀಷ ತೊಳೆಯಬೇಕು. ಕಚ್ಚಿದ ಜಾಗಕ್ಕೆ ಸ್ಥಳೀಯವಾಗಿ ಲಭ್ಯವಿರುವ ನಂಜು ನಿರೋಧಕ ಔಷಧಿ ಲಭ್ಯವಿದ್ದರೆ ಹಚ್ಚಿರಿ. ಕಚ್ಚಿದ ಜಾಗವನ್ನು ಬ್ಯಾಂಡೇಜ್ ಅಥವಾ ಯಾವುದೇ ರೀತಿಯ ಬಟ್ಟೆಯಿಂದ ಮುಚ್ಚಬೇಡಿ. ನಾಯಿ ಕಚ್ಚಿದ ಜಾಗಕ್ಕೆ ಕೇಸರು, ಹಸುವಿನ ಸಗಣೆ, ಕಾಫಿಪುಡಿ, ಮೆಣಸಿನಪುಡಿ, ಸುಣ್ಣ ಅಥವಾ ಇತರೆ ಯವುದೇ ಕಿರಿ-ಕಿರಿ ಉಂಟುಮಾಡುವ ಪದಾರ್ಥ ಹಚ್ಚಬೇಡಿ. ಎಲ್ಲಾ ನಾಯಿಗಳಿಗೆ ಪಶು ಸಂಗೋಪನಾ ಇಲಾಖೆಯಿಂದ ನೀಡುವ ಚುಚ್ಚುಮದ್ದನ್ನು ತಪ್ಪದೇ ಹಾಕಿಸಬೇಕು. ನಾಯಿ ಅಥವಾ ಯಾವುದೇ ಪ್ರಾಣಿ ಕಡಿತವಾದಲ್ಲಿ ತಕ್ಷಣ ನಿಮ್ಮ ಹತ್ತಿರದ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ, ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಚಿಕಿತ್ಸೆ ಪಡೆದುಕೊಳ್ಳಬೇಕು. ನಾಯಿ ಕಡಿತದ ಬಗ್ಗೆ ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಮಾಡಬಾರದು ಹಾಗೂ ಎಲ್ಲಾ ಸರ್ಕಾರಿ ಆಸತ್ರೆಗಳಲ್ಲಿ ರೇಬೀಸ್ ತಡೆಗಟ್ಟುವ ಲಸಿಕೆ(ಎ.ಆರ್.ವಿ) ಮತ್ತು ರೇಬಿಸ್ ಇಮ್ಯುನೊ ಗ್ಲೋಬ್ಯುಲಿನ್ (ಆರ್.ಐ.ಜಿ) ಚಿಕಿತ್ಸೆ ಉಚಿತವಾಗಿರುತ್ತದೆ ಎಂದು ತಿಳಿಸಿದರು.

ಬಸವೇಶ್ವರ ಕಾಲೇಜಿನಲ್ಲಿ ಪರಿಸರ ದಿನಾಚರಣೆ.



ಸಿರವಾರ.ಜು.6 -

ಪಟ್ಟಣದ ಬಸವೇಶ್ವರ ಪದವಿ ಪೂರ್ವ ಮತ್ತು ಪದವಿ ಕಾಲೇಜಿನ ಆವರಣದಲ್ಲಿ ಸಸಿಗಳನ್ನು ಪಟ್ಟಣ ಪಂಚಾಯತಿಯ ಅಧ್ಯಕ್ಷ ಹಾಜಿ ಚೌದ್ರಿ, ಸದಸ್ಯ ಸೂರಿ ದುರುಗಣ್ಣ ನಾಯಕ ಹಾಗೂ ರಂಗನಾಥ ಸಸಿಗಳನ್ನು ನೇಡುವ ಮೂಲಕ ಪರಿಸರ ದಿನಾಚರಣೆ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ವ್ಯವಸ್ಥಾಪಕರು ಅನುರಾಧ ವೆಂಗಲ್ ರೆಡ್ಡಿ, ಪದವಿ ಕಾಲೇಜನ ಪ್ರಾಚಾರ್ಯರ ಡಾ:ಧರ್ಮಣ್ಣ ಸ್,ೕ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರ ಸೋಮಶೇಖ,ೕ ಕಾಲೇಜಿನ ಉಪನ್ಯಾಸಕರಾದ ವೈಜನಾಥ್, ರಮೇಶ್ ಪರ್ವ,ೕ ಹಾಗೂ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿಯರು ಹಾಗೂ ಮುದ್ದು ಮಕ್ಕಳು ಮತ್ತು ವಿದ್ಯಾರ್ಥಿಗಳು ಇದ್ದರು.

ರಾಮಲಿಂಗಾರೆಡ್ಡಿ ರೆಡ್ಡಿ, ಮುನಿಯಪ್ಪ ಬಳಿಕ ಈಗ ಸತೀಶ್ ಜಾರಕಿಹೊಳಿ ತಗಾದೆ

ಬೆಂಗಳೂರು, ಜೂ. 6- ಖಾತೆಗಾಗಿ ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ ಅವರ ತಗಾದೆ ಬಳಿಕ ಮತ್ತೊಬ್ಬ ಸಚಿವರು ಸಿಡಿಮಿಡಿಗೊಳ್ಳುತ್ತಿದ್ದು, ಸಮಾಜ ಕಲ್ಯಾಣ ಖಾತೆಗಾಗಿ ಪಟ್ಟುಹಿಡಿದಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರಮಾಪ್ತರಾಗಿರುವ ಸತೀಶ್ ಜಾರಕಿಹೊಳಿ ಲೋಕೋಪಯೋಗಿ ಖಾತೆ ಜೊತೆಗೆ ಅಥವಾ ಬದಲಾಗಿ ಸಮಾಜಕಲ್ಯಾಣ ಖಾತೆ ನೀಡುವಂತೆ ಒತ್ತಡ ಹೇರಿದ್ದು, ಕಾಂಗ್ರೆಸ್‌ಗೆ ಬಿಸಿ ತುಪ್ಪವಾಗಿ ಪರಿಣಮಿಸಿದೆ. ಸಮಾಜ ಕಲ್ಯಾಣ ಖಾತೆಯ ಮೇಲೆ ಸಚಿವ ಕೆ.ಎಚ್. ಮುನಿಯಪ್ಪ ಕೂಡ ಕಣ್ಣಿಟ್ಟಿದ್ದಾರೆ. ನಮಗೂ ಅದೇ ಖಾತೆ ಬೇಕೆಂದು ಸತೀಶ್ ಜಾರಕಿಹೊಳಿ, ಹೈಕಮಾಂಡ್ ಅವರ ಮುಂದೆ ವಕಾಲತ್ತು ಹಾಕಿರುವುದಾಗಿ ಮೂಲಗಳು ತಿಳಿಸಿವೆ. ಸಮಾಜ ಕಲ್ಯಾಣ ಇಲಾಖೆ ಕರ್ನಾಟಕದಲ್ಲಿ ಅತ್ಯಂತ ಪ್ರಭಾವಿ ಖಾತೆಯಾಗಿದೆ. ಸುಮಾರು 42 ಸಾವಿರ ಕೋಟಿ ರೂ.ಗಳಷ್ಟು ಅನುದಾನ ಬೇರೆ ಬೇರೆ ಇಲಾಖೆಗಳ ಮೂಲಕ ಖರ್ಚಾಗುತ್ತಿದೆ. ಎಸ್‌ಇಪಿ-ಟಿಎಸ್‌ಪಿ ಹಿನ್ನೆಲೆಯಲ್ಲಿ ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಹೆಚ್ಚಿನ ಹಣಕಾಸು ನೆರವು ದೊರೆಯುತ್ತಿದೆ. ಜೊತೆಗೆ ಅತ್ಯಂತ ಪ್ರಭಾವ ಶಾಲಿಯಾಗಿ ಕೆಲಸ ಮಾಡಲು ಅವಕಾಶಗಳಿವೆ.

ಕಿಲ್ಲನಕೇರಿ ಗ್ರಾಮಸ್ಥರಿಗೆ ನೀರಿನ ದಾಹ ತೀರಿಸಿದ ನಿಖಿಲ್ ವಿ ಶಂಕರ

ಸುರಪುರ, ಜೂ.06-

ಯಾದಗಿರಿ ತಾಲೂಕಿನ ಸೈದಾಪೂರ ಹೋಬಳಿಯ ಕಿಲ್ಲನಕೇರಾ ಗ್ರಾಮದಲ್ಲಿ ಕುಡಿಯಲು ನೀರಿಲ್ಲದೆ ಗ್ರಾಮಸ್ಥರು ಬೇಸಿಗೆಯಲ್ಲಿ ಪರದಾಡಿದರು ಹಾಗೂ ಶ್ರೀ ವ್ೀಲಾ ರ್ಲಿಂಗೇಶ್ವ ರ್ ದೇವಸ್ಥಾನವನ್ನು ನಿರ್ಮಿಸುತ್ತಿದ್ದೇವೆ ನಮ್ಮ ಊರಿಗೆ ನೀರಿನ ಸಮಸ್ಯೆ ಇದೆ ಎಂದು ಮನವಿ ಮಾಡಿದಾಗ ದಯಾಳುಗಳಾದ ತಾವು ಒಂದು ಬೋರವೆಲ್ ಹಾಕಿಸಿ ಕೊಟ್ಟರೆ ಒಳ್ಳೇದು ಆಗುತ್ತದೆ ಗ್ರಾಮಸ್ಥರಿಗೂ ಕುಡಿಯುವ ನೀರಿಗೆ



ಸಹಕಾರಿಯಾಗುತ್ತದೆ ಎಂದು ಗ್ರಾಮಸ್ಥರು ಮನವಿ ಮಾಡಿಕೊಂಡಾಗ ತಕ್ಷಣವೇ ಅವರ ಮನವಿಗೆ ಸ್ಪಂದಿಸಿದ



ಶ್ರೀ ನಿಖಿಲ್ ವಿ ಶಂಕರ್ ರಾಜ್ಯ ಉಪಾಧ್ಯಕ್ಷರು, ಕರ್ನಾಟಕ ಪ್ರದೇಶ ಯುವ ಕಾಂಗ್ರೇಸ್ ಸಮಿತಿ,ಬೆಂಗಳೂರು ಅವರು ಬೋರವೆಲ್ ಹಾಕಿಸಿಕೊಟ್ಟರು ಅವರಿಗೆ ಗ್ರಾಮ ಮುಖಂಡರು ಧನ್ಯವಾದಗಳನ್ನು ತಿಳಿಸಿದರು

ಡಾ ಎಸ್ .ಪಿ .ಬಿ .ಗಾನಗಳ ಗಾರುಡಿಗ .ಡಾ .ಬಿರಾದಾರ



ಭಾರತೀಯ ಚಲನಚಿತ್ರ ರಂಗದ ಹಿನ್ನೆಲೆ ಗಾಯಕರು ಪ್ರಸಿದ್ಧ ರಾಧವರು. ಸಾವಿರಾರು ಗೀತೆಗಳನ್ನ ಹಾಡಿ ಬಹುಭಾಷೆಗಳ ಹಿನ್ನೆಲೆ ಗಾಯಕ ಎಸ್ ಪಿ ಬಿ ಅಂದರೆ ಡಾ. ಎಸ್.ಪಿ ಬಾಲಸುಬ್ರಮಣ್ಯಂ .ಇವರು 1946 ಜೂನ್ 4 ರಂದು ನೆಲ್ಲೂರಿನಲ್ಲಿ ಜನಸಿದರು. ಬಾಲ್ಯದಿಂದಲೂ ಬಹಳ ಕ್ರಿಯಾಶೀಲ ಮತ್ತು ವಿಶೇಷವಾಗಿ ಸಂಗೀತಕ್ಕೆ ಆಸಕ್ತಿಯನ್ನು ಹೊಂದಿದ್ದರು. ಪ್ರಾರಂಭದಲ್ಲಿ ಶಾಸ್ತ್ರೀಯ ಸಂಗೀತವನ್ನು ಕಲಿತು ನಂತರ ಭಾಷೆಗಳ ಚಲನಚಿತ್ರ ಹಲವು ನಾಯಕರಿಗೆ ಹಿನ್ನೆಲೆ ಗಾಯನವನ್ನು ಅವರ ಧ್ವನಿ ಹಾಗೆ. ಹಾಡಿ ಪ್ರಸಿದ್ಧಿಯನ್ನು ಪಡೆದಂತ ಖ್ಯಾತ ಹಿನ್ನೆಲೆ ಗಾಯಕರು ಡಾ. ಎಸ್ .ಪಿ .ಬಿ. ಇವರು ತಮಿಳು .ಹಿಂದಿ .ತೆಲುಗು

ಕನ್ನಡ ಹೀಗೆ ಹಲುವ ಭಾಷೆಗಳ ಚಲನಚಿತ್ರಗಳಲ್ಲಿ ಧ್ವನಿಗೆ ತಕ್ಕಹಾಗೆ ಹಾಡನ್ನು ಹಾಡಿದವರು .ಇವರು ಸುಮಾರು 45000 ಸಾವಿರ ಹಾಡುಗಳನ್ನು ಹಾಡಿ ದಾಖಲೆಯನ್ನು ನಿರ್ಮಾಣ ಮಾಡಿದ್ದಾರೆ .ಹಿನ್ನೆಲೆ ಗಾಯಕರಾಗಿ .ನಿರ್ದೇಶಕರಾಗಿ. ನಿರ್ಮಾಪಕರಾಗಿ. ಸಂಗೀತ ಕಾರ್ಯಕ್ರಮಗಳ ನಿರೂಪಕರಾಗಿ. ನಟರಾಗಿ ಸುಮಾರು 6 ರಾಷ್ಟ್ರ ಪ್ರಶಸ್ತಿ ಸುಮಾರು 25 ತೆಲುಗು ಭಾಷೆಯ ಪ್ರಶಸ್ತಿ ಹೀಗೆ ಹಲವಾರು ಪ್ರಶಸ್ತಿಯನ್ನು ಪಡೆದಂತ. ಮಹಾನ್ ಹಿನ್ನೆಲೆ ಗಾಯಕ ಡಾ.ಎಸ್ .ಪಿ .ಬಿ .ಕನ್ನಡದಲ್ಲಿ ಎದೆ ತುಂಬಿ ಹಾಡುಗಳು ಎಂಬ ಕಾರ್ಯಕ್ರಮವನ್ನು ಪ್ರಾರಂಭ ಮಾಡಿ ಹಲವಾರು ಕಲಾವಿದರನ್ನು ಗುರುತಿಸಿ ಅವರಿಗೆ ಪ್ರೋತ್ಸಾ ಹಿಡಿದಂತ ಮಹಾನ್ ವ್ಯಕ್ತಿ ಇಂ.ಥ ಖ್ಯಾತ ಹಿನ್ನೆಲೆ ಗಾಯಕನ ಗುರುತಿಸುವ ನಿಟ್ಟನಲ್ಲಿ ಮೋಹನ್ ಮೆಲೋಡಿಸ್ ಕೊರೋಕೆ ಸ್ಟುಡಿಯೋ ಮತ್ತು ಅವರ ಸಂಗೀತ ಬಳಗದವರು ಈ ಸರ್ಕಾರಿ ನೌಕರರ ಸಂಘದ ಭವನದಲ್ಲಿ ಹುಟ್ಟುಹಬ್ಬವನ್ನ ಆಚರಣೆ ಮಾಡುತ್ತಿರುವುದು. ಪ್ರಮುಖ ರಾದ ಮೋಹನ್ .ವೃತ್ತಿಯಲ್ಲಿ ವಕಿಲರಾಗಿದ್ದರು ಪ್ರಗತಿಯಲ್ಲಿ ಯಲ್ಲಿ ಸಂಗೀತವನ್ನು ಮೈಗೂಡಿಸಿಕೊಂಡಿದ್ದಾರೆ .ಒಬ್ಬ ಮಹಾನ್ ಹಿನ್ನೆಲೆ ಗಾಯಕ ಹುಟ್ಟುಹಬ್ಬ ಒಬ್ಬ ಸಂಗೀತಗಾರನಾಗಿ ಬಗ್ಗೆ ಕರೋಕೆ ಸ್ಟುಡಿಯೋ ಎಲ್ಲಾ ಸಂಗೀತ ಬಳಕೆಗೆ ಅಭಿನಂದನೆಗಳು ಎಂದು ದಿನಾಂಕ ಜೂನ್ 4 .2026 ರಂದು ರಾಯಚೂರು ನಗರದ ಸರ್ಕಾರಿ ನೌಕರ ಸಂಘದ ದಲ್ಲಿ ನಡೆದ ಡಾಕ್ಟರ್ ಎಸ್ ಬಿ ಬಾಲಸುಬ್ರಮಣ್ಯಂ ರವರ ಹುಟ್ಟು ಹಬ್ಬದ ಅಂಗವಾಗಿ ಪಾಲ್ಗೊಂಡು ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ನಂತರ ಪುಷ್ಪಗಳನ್ನ ಹಾಕಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಯಾದ ಡಾ ದಂಡಪ್ಪ ಬಿರಾದಾ,ೕ ಮಾತನಾಡಿದರು ನಂತರ ವಕೀಲರಾದ ಮತ್ತು ಹಾಡುಗಾರರಾದ ರೆಡ್ಡತಿಮ್ಮಯ್ಯ ಅವರುಮಾತನಾಡುತ್ತಾ .ರಾಯಚೂರಿಗೆ ಇವರು ಬಂದಿದ್ದರು .

ರಾಮಲಿಂಗಾರೆಡ್ಡಿ ಜೊತೆ ಸಿಎಂ ಮಾತನಾಡಿದ್ದು, ಶೀಘ್ರದಲ್ಲಿ ಸಮಸ್ಯೆ ಇತ್ಯರ್ಥ: ಡಿಸಿಎಂ ಪರಮೇಶ್ವರ್

ಬೆಂಗಳೂರು:

ಬೆಂಗಳೂರು ನಗರಾಭಿವೃದ್ದಿ ಖಾತೆಗೆ ಪಟ್ಟು ಹಿಡಿದು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ರಾಮಲಿಂಗಾರೆಡ್ಡಿ ಜೊತೆ ಸಿಎಂ ಮಾತನಾಡಿದ್ದು, ಶೀಘ್ರದಲ್ಲಿ ಸಮಸ್ಯೆ ಬಗೆಹರಿಯಲಿದೆ ಎಂದು ಉಪಮುಖ್ಯಮಂತ್ರಿ ಜಿ.ಪರಮೇಶ್ವರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸದಾಶಿವನಗರದ ನಿವಾಸ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಪರಮೇಶ್ವ,ೕ ಮುನಿಸಿಕೊಂಡಿರುವ ರಾಮಲಿಂಗಾರೆಡ್ಡಿ ಅವರನ್ನು ಪಕ್ಷದ ಮುಖಂಡರು ಮಾತನಾಡಿ ಶೀಘ್ರದಲ್ಲೇ ಸಮಾಧಾನಪಡಿಸಲಿದ್ದಾರೆ. ಅವರೊಂದಿಗೆ ಸಿಎಂ ಮಾತನಾಡಿದ್ದಾರೆ. ಎಲ್ಲ ಸಮಸ್ಯೆಗಳು ಇತ್ಯರ್ಥವಾಗಲಿದೆ ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

ಮುನಿಯಪ್ಪ ಅವರಿಗೆ ಯಾವುದೇ ಅಸಮಾಧಾನವಿಲ್ಲ. ನಿನ್ನೆ ರಾಹುಲ್ ಗಾಂಧಿ ಬಂದಾಗ ನಮ್ಮ ಜೊತೆಗೆ ಕುಳಿತು ಮಾತಾಡಿದ್ದಾರೆ ಎಂದರು. ಸಚಿವ ಸ್ಥಾನಕ್ಕಾಗಿ ಸಚಿವರ ಭಿನ್ನಮತ ಸ್ಫೋಟ ಕುರಿತಂತೆ ವಿಪಕ್ಷ ಟೀಕೆ ಕುರಿತಂತೆ ಪ್ರತಿಕ್ರಿಯಿಸಿದ ಡಿಸಿಎಂ ರಾಜಕಾರಣದಲ್ಲಿ ಇವೆಲ್ಲಾ ಸರ್ವೇ ಸಾಮಾನ್ಯ ಎಂದು ಹೇಳಿದರು.

ಕಂದಾಯ ಇಲಾಖೆ ವಹಿಸಿಕೊಂಡಿರುವ ಬಗೆಗಿನ ಪ್ರಶ್ನೆಗೆ ಉತ್ತರಿಸಿ, ಶೀಘ್ರದಲ್ಲೇ ಪತ್ರಿಕಾಗೋಷ್ಠಿ ಕರೆಯುತ್ತೇನೆ. ನಿನ್ನೆಯಷ್ಟೇ ಸಭೆ ಮಾಡಿದ್ದೇನೆ. ಸಮಯ ಬಹಳ ಕಡಿಮೆ ಇದೆ. ಎರಡೇ ವರ್ಷ ಇರೋದು. ಕಾಲಮಿತಿಯಲ್ಲಿ ಏನೆಲ್ಲಾ ಮಾಡಬೇಕೋ ಅದನ್ನು ಮಾಡುತ್ತೇನೆ. ಕೃಷ್ಣೇ ಬೈರೇಗೌಡರು ಒಳ್ಳೆಯ ಕೆಲಸ ಮಾಡಿದ್ದಾರೆ. ಉತ್ತಮ ಬದಲಾವಣೆ ತಂದಿದ್ದಾರೆ. ಇಡೀ ದೇಶದಲ್ಲೇ ಕೆಲವೊಂದು ಪ್ರಥಮವಾಗಿ ಮಾಡಿದ್ದಾರೆ. ಅದನ್ನು ಮುಂದುವರೆಸಬೇಕು. ನೇಮಕಾತಿ, ರೈತರ ಸಮಸ್ಯೆಗಳು ಇನ್ನಿತರ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಹೋಗುತ್ತೇನೆ ಎಂದರು.

ರಾಮಲಿಂಗಾ ರೆಡ್ಡಿಗೆ ನಾವು ಮಾತು ಕೊಟ್ಟಿದ್ದು ನಿಜ. ಆದರೆ ಹೈಕಮಾಂಡ್ ನಿರ್ಧಾರ ಮಾಡಿದೆ ಏನು ಮಾಡೋದು ಎಂದು ಸಿಎಂ ಡಿ.ಕೆ.ಶಿವಕುಮಾರ್ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

ವಿಧಾನಸೌಧದಲ್ಲಿ ಈ ಬಗ್ಗೆ ಶುಕ್ರವಾರ ಮಾತನಾಡಿದ ಅವರು , ಕೆ.ಹೆಚ್.ಮುನಿಯಪ್ಪ ಜೊತೆಗೆ ಮಾತಾಡಿದ್ದು, ಏನು ಕೊಟ್ಟರು ಕೆಲಸ ಮಾಡುತ್ತೇನೆಂದಿದ್ದಾರೆ. ರಾಮಲಿಂಗಾ ರೆಡ್ಡಿ ಜೊತೆಗೆ ನಾನು ನನ್ನ ತಮ್ಮ ಹೇಳಿದ್ದು ನಿಜ. ಕೊಟ್ಟಿರುವ ಮಾತು ನಿಜ. ಈಗ ಹೈಕಮಾಂಡ್ ತೀರ್ಮಾನ ಮಾಡಿದೆ. ಏನೇ ಮಾಡಿದ್ರು ಪಕ್ಷದ ವರಿಷ್ಠರು ಬಿಟ್ಟು ಮಾಡಲ್ಲ. ಹೈಕಮಾಂಡ್ ನಾಯಕರು ತೀರ್ಮಾನ ಮಾಡ್ತಾರೆ ಎಂದರು.

ಖಾತೆ ಬದಲಾವಣೆ ಆಗುತ್ತಾ ಎಂಬ ವಿಚಾರವಾಗಿ ಪ್ರತಿಕ್ರಿಯಿಸಿದ ಸಿಎಂ, ಹೈಕಮಾಂಡ್ ನಿರ್ಧಾರ ಮಾಡಿದೆ ಏನು ಮಾಡೋದು?. ರಾಮಲಿಂಗಾ ರೆಡ್ಡಿ ಸೀನಿಯರ್ ಲೀಡ,ೕ ಅವರ ಜೊತೆ ಇವತ್ತು ಮಾತನಾಡುತ್ತೇನೆ. ಸದ್ಯ ರಾಮಲಿಂಗಾ ರೆಡ್ಡಿ ಹೊರಗಡೆ ಇದಾರೆ, ಖುದ್ದಾಗಿ ಇಂದು ನಾನೇ ಭೇಟಿಯಾಗಿ ಮಾತನಾಡುತ್ತೇನೆ. ಖಾತೆ ಬದಲಾವಣೆ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ತಿಳಿಸಿದ್ದರು.

ಸಚಿವ ಕೆ.ಹೆಚ್.ಮುನಿಯಪ್ಪ ಅಸಮಾಧಾನ ಬಗೆಹರಿದಿದೆ: ಸಚಿವ ಕೆ.ಹೆಚ್.ಮುನಿಯಪ್ಪ ಜೊತೆಗೆ ಮಾತಾಡಿದ್ದು ಆಯ್ತು, ರಾಹುಲ್ ಗಾಂಧಿ ಹೇಳಿದ್ದು ಆಯ್ತು. ಮುನಿಯಪ್ಪ ಅವರು ಬಹಳ ಖುಷಿಯಾಗಿದ್ದಾರೆ. ಯಾವ ಇಲಾಖೆ ಕೊಟ್ಟರು ಕೆಲಸ ಮಾಡಿಕೊಂಡು ಹೋಗ್ತೀನಿ ಅಂತ ಮುನಿಯಪ್ಪ ಹೇಳಿದ್ದಾರೆ. ಮುನಿಯಪ್ಪ ಅಸಮಾಧಾನ ಬಗೆಹರಿದಿದೆ ಎಂದು ಸಿಎಂ ತಿಳಿಸಿದ್ದರು.

ಜನರ ಒಳಿತಿಗಾಗಿ ಒಟ್ಟಾಗಿ ಕೆಲಸ ಮಾಡೋಣ, ರಾಜಕಾರಣ ಮಾಡುವುದು ಬೇಡ : ಸಿಎಂ ಡಿಕೆಶಿ

ಬೆಂಗಳೂರು, ಜೂ. 6-

ರಾಜ್ಯದ ಜನರ ಒಳಿತಿಗಾಗಿ ಎಲ್ಲರೂ ಸೇರಿ ಒಟ್ಟಾಗಿ ಕೆಲಸ ಮಾಡೋಣ. ರಾಜಕಾರಣ ಮಾಡು ವುದು ಬೇಡ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಲಹೆ ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ 44ನೇ ಪುಣ್ಯಸರಣೆ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಡಿ.ಕೆ.ಶಿವಕುಮಾರ್ ಸುದ್ದಿ ಗಾರರೊಂದಿಗೆ ಮಾತನಾಡಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಆಡಳಿತದಿಂದ ಜನ ಸಂಕಷ್ಟ ಕ್ಕೊಳಗಾಗಿದ್ದಾರೆ ಎಂದು ಪ್ರಧಾನಿ ನಿನ್ನೆ ಟೀಕಿಸಿದ್ದರು. ಇದಕ್ಕೆ ಇಂದು ತಾಳೆಯಿಂದಲೇ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಅವರು, ಪ್ರಧಾನಿ ಯವರು ತಾವು ಮುಖ್ಯಮಂತ್ರಿ ಯಾದಾಗ ಅಭಿನಂದಿಸಿದ್ದಾರೆ, ನಾನು ಅದಕ್ಕೆ ಧನ್ಯವಾದ ಹೇಳಿದ್ದೇನೆ. ಮುಂದಿನ ದಿನಗಳಲ್ಲಿ ಅವರನ್ನು ಗೌರವಯುತವಾಗಿ ಭೇಟಿ ಮಾಡು ತ್ತೇನೆ. ಅವರೂ ರಾಜಕಾರಣ ಮಾಡು ವುದು ಬೇಡ, ನಾವೂ ರಾಜಕಾರಣ ಮಾಡುವುದಿಲ್ಲ. ರಾಜ್ಯದ ಜನರ ಒಳಿತಿಗಾಗಿ ಒಟ್ಟಾಗಿ ಕೆಲಸ ಮಾಡೋಣ ಎಂದು ಹೇಳಿದರು.

ಸಚಿವ ರಾಮಲಿಂಗಾರೆಡ್ಡಿ ನನ್ನ ಸ್ನೇಹಿತರು, ಅವರ ಜೊತೆ ಚರ್ಚೆ ಮಾಡಿದ್ದೇನೆ. ವಾಟ್ಸಾಪ್‌ನಲ್ಲಿ ರಾಜೀನಾಮೆ ಕಳುಹಿಸಿದ್ದರು. ಈಗ ಅದು ಇತ್ಯರ್ಥವಾಗಿದೆ ಎಂದಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR